ಸಂಪುಟ : 9 ಸಂಚಿಕೆ 239 ಪುಟ : 4 ಬೆಲೆ: 3.00 ಗುರುವಾರ ಅಕ್ಟೋಬರ್ 31 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ








Volume : 9 Issue : 239 Pages : 4 Price : 3.00 Thursday October 31 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25


## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್. 31 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 - ಗಂಗಿಮಡಿ, ನಿಂಗಪ್ಪರ ಲೈನ್, ಪಾಮಡೆಯವರ ಲೈನ್, ಉಕ್ಕಿಯವರ ಲೈನ್, ಸ್ವಾಮಿಯವರ ಲೈನ್, ಸಫಾಯಿಯವರ ಲೈನ್, ವಾಯದ್ ಅವರ ಲೈನ್, ಗಾರ್ಡನ್ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 11 - ಹನುಮಂತ ದೇವರ ಗುಡಿ, ನಾಗದೇವತೆಯ ಗುಡಿ, ನಿಸರ್ಗ ಬಡಾವಣೆ ನಾಲ್ಕನೇ ಕ್ರಾಸ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 33 - ಪವಾರ ಲೈನ್, ಗಡ್ಡಿಯವರ ಲೈನ್, ಬೆಲ್ಲದ ಬಾಕಳೆ ಲೈನ್, ಅಬ್ಬಿಗೇರಿ ಲೈನ್, ವೀರೇಶ್ವರ ನಗರ, ಕರಿಗೌಡ್ರ ಲೈನ್, ಬ್ಯಾಂಕರ್ಸ್ ಕಾಲೋನಿ, ಪಂಚಮುಖಿ ದೇವರ ಗುಡಿ ಲೈನ್, ಜಾಕೀರ ಹುಸೇನ ಕಾಲೋನಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 28 - ಅಪಾರ್ಟ್ಮೆಂಟ್, ಎಸ್ ಎಸ್ ಪಾಟೀಲ್ ಲೈನ್, ಕೃಷ್ಣ ಟ್ಯೂಷನ ಲೈನ್, ಸೊಲ್ಲಾಪಟ್ಟಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6, 10 - ಗಣಾಚಾರಿ ಲೈನ್, ಮುಳಗುಂದರವರ ಲೈನ್, ಮಲ್ಲಿಕಾರ್ಜುನ ಗುಡಿ, ಸಿಹಿ ನೀರಿನ ಬಾವಿ, ಮಾನೇದ ಲೇಔಟ್ ಭಾಗ -1,2 , ಬೂದ್ಲೆ ಖಾನ ಲೈನ್, ಮಸೂತಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 1 - ಎಸ್.ಎಂ. ಕೃಷ್ಣ ನಗರ ಪೂರ್ತಿ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಗದಗ ಶಹರದ ಬೆಟಗೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜು, ಇಲ್ಲಿನ ಪ್ರಥಮ ಪಿ.ಯು.ಸಿ ಹಾಗೂ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಜೀವಶಾಸ್ತ್ರ ಮತ್ತು ಇಂಗ್ಲೀಷ ವಿಷಯಗಳನ್ನು ಭೋಧಿಸಲು ಸ್ನಾತಕೋತ್ತರ ಪದವಿಯೊಂದಿಗೆ ಬಿ.ಎಡ್ ಹೊಂದಿದ ಅತಿಥಿ ಉಪನ್ಯಾಸಕರು ಅವಶ್ಯವಿರುತ್ತಾರೆ.

ಆದ್ದರಿಂದ ಅರ್ಹ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ನವೆಂಬರ್ 7 ರೊಳಗಾಗಿ ತಮ್ಮ ಶೈಕ್ಷಣಿಕ ದಾಖಲಾತಿಗಳನ್ನು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜು, ಬೆಟಗೇರಿಯ ಕಚೇರಿಗೆ ಖುದ್ದು ಭೇಟಿ ನೀಡಿ ಅರ್ಜಿ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಾಶಿನಾಥ. ಕೆ ಪ್ರಾಂಶುಪಾಲರು, ಮೊರಾರ್ಜಿ ದೇಸಾಯಿ ವಸತಿ ಕಾಲೇಜು, ಮುಂಡರಗಿ ಮೊ: 8722390388 ಇವರಿಗೆ ಸಂಪರ್ಕಿಸಬಹುದಾಗಿದೆ.

### ರಾಜ್ಯದ ಪ್ರವಾಸೋದ್ಯಮ ಕ್ಷೇತ್ರದ ಬೆಳವಣಿಗೆಗೆ ವೇಗ: ಸಚಿವ ಎಚ್.ಕೆ. ಪಾಟೀಲ

# ಪ್ರವಾಸೋದ್ಯಮ ಅಭಿವೃದ್ಧಿಗೆ ಹೊಸ ನೀತಿ

■ವಿಜಯಸಾಕ್ಷಿ ಸುದ್ದಿ, ಗದಗ

ಹೊಸ ಪ್ರವಾಸೋದ್ಯಮ ನೀತಿಯ ಮೂಲಕ ಕರ್ನಾಟಕವನ್ನು ದೇಶದ ಅಗ್ರ 3 ಪ್ರವಾಸೋದ್ಯಮ ರಾಜ್ಯಗಳ ಪೈಕಿ ಒಂದಾಗಿಸುವ ಗುರಿ ಹೊಂದಲಾಗಿದೆ. ರಾಜ್ಯದ ಪ್ರವಾಸೋದ್ಯಮ ಕ್ಷೇತ್ರದ ಬೆಳವಣಿಗೆಗೆ ವೇಗ ನೀಡುವ ಉದ್ದೇಶದಿಂದ ನೂತನ ಪ್ರವಾಸೋದ್ಯಮ ನೀತಿಯನ್ನು ಜಾರಿಗೊಳಿಸಲಾಗಿದೆ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜದ ಎಲ್ಲ ಸ್ತರಗಳ ಪ್ರವಾಸಿಗರ ಅವಶ್ಯಕತೆಯನ್ನು ಗಮನದಲ್ಲಿಟ್ಟುಕೊಂಡು ಹೊಸ ನೀತಿಯನ್ನು ರಚಿಸಲಾಗಿದೆ. ಇದಕ್ಕೆ ಸರಕಾರವೂ ಅನುಮೋದನೆ ನೀಡಿದೆ. ಹೊಸ ಪ್ರವಾಸೋದ್ಯಮ ನೀತಿಯಲ್ಲಿ ಮುಖ್ಯವಾಗಿ ಸಾಹಸ ಪ್ರವಾಸೋದ್ಯಮ, ಕರಾವಳಿ, ಬೀಚ್, ಪಾರಂಪರಿಕ, ಪರಿಸರ, ಶೈಕ್ಷಣಿಕ, ಒಳನಾಡಿನ ಜಲ ಪ್ರವಾಸೋದ್ಯಮ, ಗಣಿಗಾರಿಕೆ ಪ್ರವಾಸೋದ್ಯಮ, ಬುಡಕಟ್ಟು ಹೀಗೆ ಒಟ್ಟು 25 ವಿಷಯಾಧಾರಿತ ಕ್ಷೇತ್ರಗಳನ್ನು ಗುರುತಿಸಲಾಗಿದೆ. ಇದನ್ನು ಯಶಸ್ವಿಗೊಳಿಸಲು 44 ಯೋಜನೆಗಳನ್ನು ನೀತಿಯಲ್ಲಿ ಅಳವಡಿಸಲಾಗಿದೆ ಎಂದರು.

ಕಳೆದ ಐದು ವರ್ಷಗಳಲ್ಲಿ ಕರ್ನಾಟಕ




ಪ್ರವಾಸೋದ್ಯಮ ಯಾವ ಸ್ಥಾನದಲ್ಲಿದೆಯೋ ಅದಕ್ಕಿಂತ ಮೇಲೆಕ್ಕೆ ಹೋಗಬೇಕು ಎನ್ನುವ ಗುರಿ ಹೊಂದಿದ್ದೇವೆ. ಸದ್ಯ 26-30 ಕೋಟಿ ಜನರು ವಿವಿಧ ಕ್ಷೇತ್ರಗಳಿಗೆ ಭೇಟಿ ನೀಡುತ್ತಿದ್ದಾರೆ. ಆ ಪ್ರಮಾಣ 48 ಕೋಟಿಗೆ ಏರಿಕೆಯಾಗಬೇಕು. ಅದೇ ರೀತಿ ಸದ್ಯ 10-12 ಲಕ್ಷ ವಿದೇಶ ಪ್ರವಾಸಿಗರು ರಾಜ್ಯಕ್ಕೆ ಭೇಟಿ ನೀಡುತ್ತಿದ್ದಾರೆ. ಅದು 20 ಲಕ್ಷಕ್ಕೆ ಏರಿಕೆಯಾದಾಗ ಕರ್ನಾಟಕ ದೇಶದ ಟಾಪ್ 3 ಪ್ರವಾಸಿ ರಾಜ್ಯಗಳ ಪಟ್ಟಿಯಲ್ಲಿ ಸ್ಥಾನ ಪಡೆಯಲಿದೆ ಎಂದು ವಿವರಿಸಿದರು.

ಹೊಸ ಪ್ರವಾಸೋದ್ಯಮ ನೀತಿ ಯಶಸ್ವಿಯಾಗಬೇಕಾದರೆ ಜನರ ಸಹಕಾರ ಅಗತ್ಯವಾಗಿದೆ. ಪ್ರವಾಸಿಗರ ಜೊತೆ ಜನರ ಸ್ನೇಹಪರ ವ್ಯವಹಾರ ಮತ್ತು ಸಹಭಾಗಿತ್ವದಿಂದಲೇ ಪ್ರವಾಸೋದ್ಯಮ ಕ್ಷೇತ್ರವನ್ನು ಉತ್ತುಂಗಕ್ಕೆ ಕೊಂಡೊಯ್ಯಲು ಸಾಧ್ಯ ಎಂದರು.

1924ರಲ್ಲಿ ಬೆಳಗಾವಿಯಲ್ಲಿ ಎಐಸಿಸಿ ಅಧಿವೇಶನ ನಡೆದಿತ್ತು. ಮಹಾತ್ಮ ಗಾಂಧೀಜಿ ಆ ಅಧಿವೇಶನದ ಅಧ್ಯಕ್ಷತೆ ವಹಿಸಿಕೊಳ್ಳುವ ಮೂಲಕ ಸ್ವಾತಂತ್ರ್ಯ ಸಂಗ್ರಾಮದ ಸ್ವರೂಪವನ್ನೇ ಬದಲಾಯಿಸಿದರು. ಸ್ವಾತಂತ್ರ್ಯ ಚಳವಳಿಗೆ ಪ್ರೇರಣೆ ನೀಡುವ ಸಮಾವೇಶವಾಗಿ ಬದಲಾಗಿದ್ದರಿಂದ ಆ ಸಮಾವೇಶಕ್ಕೆ ಐತಿಹಾಸಿಕ ಮಹತ್ವವಿದೆ. ಮಹಾತ್ಮ ಗಾಂಧೀಜಿ ಭೇಟಿಯ ಶತಮಾನೋತ್ಸವವನ್ನು ವರ್ಷಪೂರ್ತಿ ಆಚರಿಸಲು ನಿರ್ಧಸಲಾಗಿದೆ. ಶತಮಾನೋತ್ಸವ ಕಾರ್ಯಕ್ರಮದ ಯಶಸ್ಸಿಗೆ 30 ಜನರ ಸಮಿತಿ ರಚಿಸಲಾಗಿದೆ. ಬೆಳಗಾವಿಯಲ್ಲಿ ನಡೆಯಲಿರುವ ಜಂಟಿ ಅಧಿವೇಶನಕ್ಕೆ ಅಮೆರಿಕಾದ ಮಾಜಿ ಪ್ರಧಾನಿ ಬರಾಕ್ ಓಬಾಮಾ ಅವರನ್ನು ಆಹ್ವಾನಿಸಲಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬಿ.ಬಿ. ಅಸೂಟಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಗುರಣ್ಣ ಬಳಗಾನೂರ, ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ, ಕಪ್ಪತಗುಡ್ಡ ಪ್ರದೇಶದಲ್ಲಿ ಗಣಿಗಾರಿಕೆಗೆ ಸಂಬಂಧಿಸಿ ಪ್ರತಿಕ್ರಿಯಿಸಿದ ಸಚಿವ ಎಚ್.ಕೆ. ಪಾಟೀಲ, ಕಪ್ಪತಗುಡ್ಡದಲ್ಲಿ ಯಾವುದೇ ರೀತಿಯ ಗಣಿಗಾರಿಕೆ ನಡೆಯಬಾರದು ಎಂದು ಜಿಲ್ಲೆಯ ಜನ ತೀರ್ಮಾನ ಮಾಡಿದ್ದಾರೆ. ಆದರೂ ಕೆಲವರು ಗಣಿಗಾರಿಕೆಗೆ ಅನುಮತಿ ಕೋರಿದ್ದಾರೆ. ವನ್ಯಜೀವಿ ಮಂಡಳಿ ಸಭೆಯಲ್ಲಿ ಆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಮುಖ್ಯಮಂತ್ರಿಗಳು ಇದರ ಬಗ್ಗೆ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು.

### ಸರ್ದಾರ ವಲ್ಲಭಭಾಯಿ ಪಟೇಲರ ಜನ್ಮದಿನ ಅಂಗವಾಗಿ ಬಿಜೆಪಿ ವತಿಯಿಂದ ಏಕತಾ ಓಟ

# ಸರ್ದಾರ್ ಪಟೇಲರ ದೇಶಸೇವೆ ಸ್ಮರಣೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಹಾಗೂ ಗದಗ ನಗರ ಬಿಜೆಪಿ ಘಟಕದ ವತಿಯಿಂದ ಸರ್ದಾರ ವಲ್ಲಭಭಾಯಿ ಪಟೇಲ್‌ರ ಹಾಗು ಬಿರಸಾ ಮುಂಡಾ ಅವರ 150ನೇ ಜನ್ಮದಿನ ಅಂಗವಾಗಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಕರೆಯಂತೆ ಏಕತಾ ಓಟವನ್ನು ಗದಗ ನಗರದ ಬೂಮರೆಡ್ಡಿ ಸರ್ಕಲ್‌ನ ಪಂ. ಪುಟ್ಟರಾಜ ಕವಿಗವಾಯಿಗಳ ಪುತ್ಥಳಿಯ ಮುಂಭಾಗದಿಂದ ಆರಂಭಿಸಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ತೊಂಟದಾರ್ಯ ಮಠದ ಮುಂಭಾಗದಲ್ಲಿ ಮುಕ್ತಾಯಗೊಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಸರ್ದಾರ ವಲ್ಲಭಭಾಯಿ ಪಟೇಲರ ಕಾರ್ಯ, ದೇಶಸೇವೆ ಮತ್ತು ಅವರ ದಿಟ್ಟ ನಿರ್ಧಾರಗಳು ದೇಶದ ಏಕತೆಗೆ ಕಾರಣವಾಗಿದೆ ಎಂದು ಹೇಳಿದರು.

ಬಿಜೆಪಿ ನಗರಾಧ್ಯಕ್ಷ ಅನಿಲ ಅಬ್ಬಿಗೇರಿ ಮಾತನಾಡಿ, ವಲ್ಲಭಭಾಯಿ ಪಟೇಲರ ಜೀವನ ಚರಿತ್ರೆ ಮತ್ತು ಅವರು ದೇಶಕ್ಕೆ




ಕೊಟ್ಟುಹೋಗಿರುವ ಅವರ ಜೀವನದ ಕತೆಯನ್ನು ಇಂದಿನ ಯುವ ಪೀಳಿಗೆ ಓದಿ, ಅರ್ಥೈಸಿ ಅಳವಡಿಸಿಕೊಳ್ಳಬೇಕೆಂದು ಹೇಳಿದರು.

ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಕ್ಕಿರೇಶ ರಟ್ಟಿಹಳ್ಳಿ, ಹಿರಿಯರಾದ ಎಂ.ಎಸ್. ಕರಿಗೌಡ್ರ, ಜಗನ್ನಾಥಸಾ ಭಾಂಡಗೆ, ತೋಟೋಸಾ ಭಾಂಡಗೆ, ಡಾ. ಶೇಖರ ಸಜ್ಜನರ, ಅಶೋಕ ಸಂಕಣ್ಣವರ, ವಿಜಯಕುಮಾರ ಗಡ್ಡಿ, ವಿನಾಯಕ ಮಾನ್ವಿ, ಕೆ.ಪಿ. ಕೊಟಿಗೌಡ್ರ, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ಯೋಗೇಶ್ವರಿ ಭಾವಿಕಟ್ಟಿ, ಶಂಕರ ಕರಿಬಿಷ್ಠಿ, ಶಶಿಧರ ದಿಂಡೂರ, ಕಮಲಾಕ್ಷಿ ಗೊಂದಿ, ಸ್ವಾತಿ ಅಕ್ಕಿ, ಅಮರನಾಥ ಬೆಟಗೇರಿ, ಅಪ್ಪಣ್ಣ ಟೆಂಗಿನಕಾಯಿ, ಕೊನೆವಾಲಾ, ಜಯಶ್ರೀ ಅಣ್ಣಿಗೇರಿ, ಅಮರನಾಥ ಗಡಗಿ, ಮಂಜುನಾಥ ಶಾಂತಗೇರಿ, ಸುಧಿರ ಕಾಟಿಗರ, ಚಂದ್ರು ತಡಸದ, ನಾಗರಾಜ ತಳವಾರ, ಅಯ್ಯಪ್ಪ ಅಂಗಡಿ, ಶಂಕರ ಕಾಕಿ, ಕಾರ್ತಿಕ ಶಿಗ್ಲಿಮಠ, ರಾಹುಲ ಸಂಕಣ್ಣವರ, ರವಿ ಮಾನ್ವಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

ಶಿರಹಟ್ಟಿ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ವಲ್ಲಭಭಾಯಿ ಪಟೇಲರು ಕಾಶ್ಮೀರದ ವಿಷಯದಲ್ಲಿ 50 ರಾಜ ಮನೆತನಗಳ ಮನವೊಲಿಸಿ ಕಾಶ್ಮೀರವನ್ನು ಭಾರತದಲ್ಲಿ ಉಳಿಸಲು ಶ್ರಮವಹಿಸಿ ದೇಶದ ಅಖಂಡತೆ, ಐಕ್ಯತೆ, ಒಗ್ಗಟ್ಟನ್ನು ಕಾಪಾಡುವಲ್ಲಿ ಶ್ರಮಿಸಿದ್ದಾರೆಂದು ಹೇಳಿದರು.

## ನೂತನ ಶಾಲಾ ಕೊಠಡಿ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರಾಮನಗರಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ, ಲೋಕೋಪಯೋಗಿ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ 2022-23ನೇ ಸಾಲಿನ ವಿವೇಕ ಯೋಜನೆಯಡಿ ನಿರ್ಮಿಸಲಾದ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆ ನಂ. 18ರ ನೂತನ ಕೊಠಡಿಯನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಬಿ.ಬಿ. ಅಸೂಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಕೆ.ಡಿ.ಪಿ. ಸಮಿತಿಯ ಸದಸ್ಯ ಎಸ್.ಎನ್. ಬಳ್ಳಾರಿ ಸೇರಿದಂತೆ ಗಣ್ಯರು ಹಾಜರಿದ್ದರು.

### ಲಕ್ಷ್ಮೇಶ್ವರದ ಅನೇಕ ರೈತರ ಜಮೀನುಗಳ ಪಹಣಿಯಲ್ಲೂ ವಕ್ಫ್ ಆಸ್ತಿ ಮೊಹರು

# ವಕ್ಫ್ ಹೆಸರು ಕಡಿಮೆಗೊಳಿಸಲು ರೈತರ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದ ಅನೇಕ ಕಡೆ ರೈತರ ಜಮೀನುಗಳ ಪಹಣಿಯಲ್ಲಿ ವಕ್ಫ್ ಬೋರ್ಡ್ ಆಸ್ತಿ ಎಂದು ನಮೂದಾದ ಬಗ್ಗೆ ದೊಡ್ಡ ಅವಾಂತರವೇ ಸೃಷ್ಟಿಯಾಗಿದ್ದು, ಈ ಬಗ್ಗೆ ಲಕ್ಷ್ಮೇಶ್ವರ ತಾಲೂಕಿನ ಅನೇಕ ರೈತರು ಸಹ ಹಲವು ವರ್ಷದಿಂದ ಈ ಸಮಸ್ಯೆ ಎದುರಿಸುತ್ತಿರುವ ಬಗ್ಗೆ ಬುಧವಾರ ತಹಸೀಲ್ದಾರ ಕಚೇರಿಯೆದುರು ತಮ್ಮ ಅಸಮಾಧಾನ ವ್ಯಕ್ತಪಡಿಸಿ, ತಲೆಮಾರುಗಳಿಂದ ನಮ್ಮ ಹೆಸರಿನಲ್ಲಿರುವ ಕೃಷಿ ಭೂಮಿಯ ದಾಖಲೆಯಲ್ಲಿ ನಮೂದಾದ ವಕ್ಫ್ ಮಂಡಳಿ ಹೆಸರು ತೆಗೆದುಹಾಕುವಂತೆ ರೈತರು ತಹಸೀಲ್ದಾರ ವಾಸುದೇವ ಸ್ವಾಮಿ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ರೈತ ಶಿವಣ್ಣ ಕಟಗಿ, ನಮ್ಮ ಹೆಸರಿನ ಪಹಣಿಯಲ್ಲೂ ವಕ್ಫ್ ಆಸ್ತಿಯ ಕರಿ ನೆರಳು ಬಿದ್ದಿರುವುದು ನಮ್ಮನ್ನು ಚಿಂತೆಗೀಡು ಮಾಡಿದೆ.



2019ರವರೆಗೆ ಆಸ್ತಿಯಲ್ಲಿ ಕೇವಲ ನಮ್ಮ ಹೆಸರು ಮಾತ್ರ ಇದ್ದು, ಇದೀಗ ಪಹಣಿಯಲ್ಲಿ ವಕ್ಫ್ ಮಂಡಳಿ ಹೆಸರು ದಾಖಲಾಗಿದೆ. ಇದರಿಂದ ರೈತರಿಗೆ ಬೆಳೆವಿಮೆ, ಬೆಳೆಹಾನಿ, ಬೆಳೆಸಾಲ ಸೇರಿದಂತೆ ಯಾವುದೇ ಸರಕಾರ ಯೋಜನೆಗಳು ಸಿಗದೇ ವಂಚಿತರಾಗಿದ್ದೇವೆ. ಆಸ್ತಿಯಲ್ಲಿನ ಹೆಸರು ಬದಲಾವಣೆ ಮಾಡಿಕೊಳ್ಳಲು ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿ ಹೋರಾಟ ಮಾಡುತ್ತಿದ್ದೇವೆ.

ಈ ಸಮಸ್ಯೆ ಬಗೆಹರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಪ್ರಯೋಜನವಾಗುತ್ತಿಲ್ಲ. 15 ದಿನದೊಳಗೆ ಆಸ್ತಿ ಮೇಲಿರುವ ವಕ್ಫ್ ಮಂಡಳಿ ಹೆಸರು ಕಡಿಮೆಯಾಗದಿದ್ದಲ್ಲಿ ಸಾವಿರಾರು ರೈತರೊಂದಿಗೆ ತಹಸೀಲ್ದಾರ ಕಚೇರಿ ಎದುರಿನಲ್ಲಿ ಸತ್ಯಾಗ್ರಹ ಪ್ರಾರಂಭಿಸುವದಾಗಿ ಎಚ್ಚರಿಕೆ ನೀಡಿದರು.

ಲಕ್ಷ್ಮೇಶ್ವರ, ಶಿಗ್ಗಿ, ಗೊಜನೂರ, ಗೋನಾಳ, ಯಳವತತಿ, ಬಡ್ನಿ, ಸಂಕದಾಳ, ಸೂರಣಗಿ, ಬಟ್ಟೂರ, ಮಾಡಳ್ಳಿ ಸೇರಿ 40ಕ್ಕೂ ಹೆಚ್ಚು ಆಸ್ತಿಗಳ ನೂರಾರು ಎಕರೆ ರೈತರ ಜಮೀನುಗಳ ಪಹಣಿಯಲ್ಲಿ ವಕ್ಫ್ ಹೆಸರು ನಮೂದಾಗಿದೆ ಎಂಬ ಮಾಹಿತಿ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ.

ಈ ಸಂದರ್ಭದಲ್ಲಿ ಬಸವರಾಜ ಗೋಡಿ, ಪ್ರಕಾಶ ಹುಬ್ಬಳ್ಳಿ, ದ್ಯಾಮಣ್ಣ, ಎಸ್.ಎಚ್. ಪೂಜಾರ, ನಾಗಪ್ಪ ಪಾಣಿಗಟ್ಟಿ, ಶಿವನಗೌಡ್ರ ಅಡರಕಟ್ಟಿ, ವಿ.ಎಸ್. ಬೆಲ್ಲದ, ನಾಗಪ್ಪ ಓಂಕಾರಿ, ಭರಮಣ್ಣ ರೊಟ್ಟಿಗವಾಡ ಮುಂತಾದವರಿದ್ದರು.

ಮನವಿ ಸ್ವೀಕರಿಸಿದ ತಹಸೀಲ್ದಾರ ವಾಸುದೇವ ಸ್ವಾಮಿ, ರೈತರು ಮತ್ತು ವಕ್ಫ್ ಬೋರ್ಡ್‌ನವರೊಂದಿಗೆ ದಾಖಲೆ ಪಡೆದು ಸಮಕ್ಷಮ ವಿಚಾರಣೆ ನಡೆಸಿ ಸೂಕ್ತ ಕ್ರಮ ತೆಗೆದುಕೊಳ್ಳುತ್ತೇವೆ. ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣ ಖುಲಾಸೆಯಾಗಿರುವವರ ಖಾತೆಗಳಲ್ಲಿ ಬದಲಾವಣೆಗಳಾಗಿವೆ. ಉಳಿದೆಲ್ಲವನ್ನೂ ಕೂಲಂಕುಷವಾಗಿ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.

## ಸಾಕ್ಷಿ ಸುಭಾಷಿತ

ಸುತ್ತಲಿನ ಜನರು ನಮ್ಮ ಮೇಲೆ ನಂಬಿಕೆಯನ್ನು ಕಳೆದುಕೊಂಡರೂ, ನಮ್ಮ ಮೇಲೆ ನಾವು ಯಾವತ್ತೂ ನಂಬಿಕೆಯನ್ನು ಕಳೆದುಕೊಳ್ಳಬಾರದು!. ಇದೆ ಯಶಸ್ಸಿನ ಗುಟ್ಟು

–ಸುಭಾಷಿತ

## ಸಂಪಾದಕೀಯ

# ಕನ್ನಡ ಕಲಿಯದಿದ್ದರೂ ಗೌರವ ನೀಡುವುದನ್ನಾದರೂ ಕಲಿಯಲಿ

ಕನ್ನಡ ರಾಜ್ಯೋತ್ಸವ ಸಮೀಪಿಸುತ್ತಿರುವ ಈ ಘಳಿಗೆಯಲ್ಲಿ ಪರಭಾಷಿಕರ ಅಟ್ಟಹಾಸದ ಬಗ್ಗೆ ವ್ಯಾಪಕವಾದ ಆಕ್ರೋಶ ವ್ಯಕ್ತವಾಗುತ್ತಿದೆ. ಅದರಲ್ಲೂ ರಾಜಧಾನಿ ಬೆಂಗಳೂರಿನಲ್ಲಿರುವ ಅನ್ಯಭಾಷಿಕರ ಕನ್ನಡ ದ್ವೇಷದ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ವ್ಯಕ್ತವಾಗಿರುವ ವಿರೋಧಗಳು ಕರ್ನಾಟಕದಲ್ಲಿ ಕನ್ನಡಿಗರ ಅಸ್ತಿತ್ವವನ್ನ ಪ್ರಶ್ನೆ ಮಾಡುವಂತಿವೆ.

ಸಾಮಾಜಿಕ ಜಾಲತಾಣದಲ್ಲಿ ಅನ್ಯಭಾಷಿಕರು ಕನ್ನಡದ ಬಗ್ಗೆ ವ್ಯಕ್ತಪಡಿಸುತ್ತಿರುವ ಅಭಿಪ್ರಾಯಗಳು ಸರ್ವತಹ ಒಪ್ಪಿತವಲ್ಲ. ವಿಡಿಯೋ ಒಂದರಲ್ಲಿ 12 ವರ್ಷಗಳಿಂದ ಕರ್ನಾರ್ಟಕದಲ್ಲಿ ವಾಸವಾಗಿರುವ ವ್ಯಕ್ತಿ ಒಬ್ಬ, ನನಗೆ ಕನ್ನಡ ಕಲಿಯುವ ಅವಶ್ಯಕತೆಯೇ ಇಲ್ಲ. ಅಷ್ಟಕ್ಕೂ ನನಗೆ ಭಾಷೆ ಬರದಿದ್ದರೂ ಯಾವುದೇ ಸಮಸ್ಯೆ ಆಗಿಲ್ಲ ಎಂದು ಉತ್ತರಿಸಿರುವುದು ಚಿಂತನಾರ್ಹ ವಿಷಯ.

ಇನ್ನೊಬ್ಬ ಐಟಿ ಉದ್ಯೋಗಿ, ನಾನ್ಯಾಕೆ ಕನ್ನಡ ಕಲಿಯಬೇಕು ಎಂದು ಪ್ರಶ್ನಿಸಿದ್ದಾರೆ. ಮತ್ತೊಬ್ಬ ಕನ್ನಡ ಕಲಿಯದಿದ್ದರೆ ಏನಾಗುತ್ತದೆ ಎಂದು ಸೊಕ್ಕಿನ ಮಾತನಾಡಿದ್ದಾನೆ. ಇನ್ನು ಹಲವಾರು ಜನ ಸಂವಿಧಾನಿಕ ಪದಗಳನ್ನು ಬಳಸಿ ಕನ್ನಡ ಭಾಷೆಯನ್ನ ಕನ್ನಡದ ನೆಲವನ್ನ ಅವಮಾನಗೊಳಿಸುವ ಕೆಲಸವನ್ನ ಮಾಡಿದ್ದಾರೆ.

ಅಷ್ಟಕ್ಕೂ ಇದೆಲ್ಲದಕ್ಕೆ ಕನ್ನಡ ನಾಡಿನ ವಿಶಾಲ ಹೃದಯದವರೇ ಕಾರಣ. ಎದುರಿಗಿರುವ ವ್ಯಕ್ತಿಗೆ ಕನ್ನಡ ಬರೆದಿದ್ದರೆ ಆತನಿಗೆ ಗೊತ್ತಿರುವ ಭಾಷೆಯಲ್ಲಿ ಉತ್ತರಿಸುವುದು ನಮ್ಮ ಸಂಸ್ಕೃತಿ. ಅದಕ್ಕಿಂತ ಮಿಗಿಲಾಗಿ ಅತಿ ಹೆಚ್ಚು ಭಾಷೆಗಳನ್ನ ಕಲಿತವರು, ಬಲ್ಲವರು ಕನ್ನಡಿಗರು.

ಕೆಲವೊಮ್ಮೆ ಕನ್ನಡಿಗರಾದ ನಾವೇ ಕನ್ನಡವನ್ನು ಬಿಟ್ಟು ಇಂಗ್ಲಿಷ್ ಭಾಷೆಯಲ್ಲಿ ವ್ಯವಹಾರ ಮಾಡುವುದನ್ನ ರೂಢಿಸಿ ಕೊಂಡಿದ್ದೇವೆ. ವಿದ್ಯಾವಂತರು ಎನ್ನುವ ದಿಮಾಕಿಗೆ ಕನ್ನಡ ಬಿಟ್ಟು ಇಂಗ್ಲಿಷ್ ಮಾತನಾಡಿ, ಇಂಗ್ಲಿಷ್ ಪ್ರೇಮವನ್ನ ಪ್ರದರ್ಶಿಸಿದ್ದೇವೆ.

ಕನ್ನಡಿಗರಾದ ನಮಗೆ ಕನ್ನಡ ಬಗ್ಗೆ ಅಭಿಮಾನ ಇಲ್ಲ ಎನ್ನುವುದಾದರೆ ಅನ್ಯಭಾಷಿಕರಿಗೆ ಕನ್ನಡದ ಬಗ್ಗೆ ಪ್ರೀತಿ ಪ್ರೇಮ ಮೂಡಲು ಹೇಗೆ ಸಾಧ್ಯ? ಸದ್ಯಕ್ಕೆ ಅನ್ಯ ಭಾಷೆಕರು ಕನ್ನಡ ಕಡ್ಡಾಯವಾಗಿ ಕಲಿಯಬೇಕು ಎನ್ನುತ್ತಿಲ್ಲ. ಕನಿಷ್ಠ ಪಕ್ಷ ಕನ್ನಡದ ನೆಲದಲ್ಲಿ ಕನ್ನಡಕ್ಕೆ ಗೌರವ ಕೊಡುವುದನ್ನಾದರೂ ಕಲಿಯಬೇಕು.

## ತಹಸೀಲ್ದಾರ ವಾಸುದೇವ ಸ್ವಾಮಿ ಅವರ ಮೂಲಕ ಸರಕಾರಕ್ಕೆ ಒತ್ತಾಯ


# ಒಳಮೀಸಲಾತಿ ಜಾರಿ ಕೈಬಿಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ ಜಾರಿಗೊಳಿಸುವ ಪ್ರಸ್ತಾವ ವಿರೋಧಿಸಿ ಬಂಜಾರ (ಲಂಬಾಣಿ), ಕೊರಮ, ಕೊರಚ, ಭೋವಿ (ವಡ್ಡರ) ಭಜಂತ್ರಿ ಸೇರಿದಂತೆ ವಿವಿಧ ಸಮಾಜದ ನೂರಾರು ಸಾರ್ವಜನಿಕರು ಬುಧವಾರ ತಹಸೀಲ್ದಾರ ವಾಸುದೇವ ಸ್ವಾಮಿ ಅವರ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಬಂಜಾರ ಸಮಾಜದ ಮುಖಂಡರುಗಳಾದ ಅಶೋಕ ಲಮಾಣಿ, ರವಿ ಲಮಾಣಿ ಮಾತನಾಡಿ, ಅಸಮರ್ಥನೀಯ ಹಾಗೂ ದತ್ತಾಂಶಗಳನ್ನು ಆಧರಿಸಿದ ಒಳಮೀಸಲಾತಿ ವರ್ಗೀಕರಣವನ್ನು ಸಚಿವ ಸಂಪುಟ ಸಭೆಯಲ್ಲಿ ತಿರಸ್ಕರಿಸಬೇಕು. ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿಯನ್ನು ಅವೈಜ್ಞಾನಿಕ ಮತ್ತು ಕಾನೂನು ಮತ್ತು ಸಂವಿಧಾನಿಕ ಸಿಂಧುತ್ವದ ಕೊರತೆ ಎಂದು ಪರಿಗಣಿಸಿ ಸರ್ಕಾರ ಹೊಸ ಅಧ್ಯಯನ ನಡೆಸಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿನ ಸಮುದಾಯಗಳ ದತ್ತಾಂಶಗಳನ್ನು ವೈಜ್ಞಾನಿಕವಾಗಿ ಸಂಗ್ರಹಿಸದೇ ತರಾತುರಿಯಲ್ಲಿ ಒಳಮೀಸಲಾತಿ ಜಾರಿಗೊಳಿಸಬಾರದು. ಪರಿಶಿಷ್ಟ ಜಾತಿಗಳಲ್ಲಿ ಲಂಬಾಣಿ ಕೊರಚ, ಕೊರಮ, ಭೋವಿ, ವಡ್ಡರ



ಸೇರಿದಂತೆ 101 ಜಾತಿಗಳಿದ್ದು, ಕೇವಲ ಎರಡು ಜಾತಿಗಳಿಗೆ ಒಳಮೀಸಲಾತಿ ನೀಡುವುದರಿಂದ ಉಳಿದ 99 ಜಾತಿಗಳಿಗೆ ಅನ್ಯಾಯವಾಗಲಿದೆ. ಸರ್ಕಾರ ಪರಿಶಿಷ್ಟ ಜಾತಿಯ ಒಳಮೀಸಲಾತಿ ಕುರಿತಾಗಿ ಅವೈಜ್ಞಾನಿಕವಾಗಿದ್ದು ಸಾಮಾಜಿಕ ನ್ಯಾಯದ ಕಗ್ಗೊಲೆಯಾಗಿದೆ ಎಂದು ಆರೋಪಿಸಿದರು.

ಈ ಬಗ್ಗೆ ವೈಜ್ಞಾನಿಕ ಅಧ್ಯಯನ ಕೈಗೊಳ್ಳದೇ ಏಕಪಕ್ಷೀಯ ನಿರ್ಧಾರಗಳನ್ನು ಕೈಗೊಳ್ಳಲು ಹೊರಟಿರುವ ಸರ್ಕಾರದ ನಡೆಯನ್ನು ತೀವ್ರವಾಗಿ ಖಂಡಿಸಿದರು. 2011ರ ನಂತರ ಯಾವುದೇ ಹೊಸ ಜನಗಣತಿ ಆಗಿಲ್ಲವಾದ್ದರಿಂದ ಅದರ ಸ್ಥಿತಿಗತಿಯ ಬಗ್ಗೆ ಈ ಡಾಟಾ ಸಂಗ್ರಹ ಆಗಬೇಕು. ಒಳಮೀಸಲಾತಿ ಜಾರಿಗೆ ಮಾಡದೇ ಪರಿಶಿಷ್ಟ ಜಾತಿ ಸಮುದಾಯಗಳಿಗೆ ಯಾವುದೇ ಹಾನಿಯಾಗದಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದರು.

ತಹಸೀಲ್ದಾರ್ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿ, ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳುಹಿಸಿ ಕೊಡುವ ಭರವಸೆ ನೀಡಿದರು. ಸಂಧರ್ಭದಲ್ಲಿ ಕರ್ನಾಟಕ ಸಂತ ಸೇವಾಲಾಲ ಸಂಘದ ತಾಲೂಕಾ ಅಧ್ಯಕ್ಷ ಪರಮೇಶ ಲಮಾಣಿ, ಭೋವಿ ಸಮಾಜದ ತಾಲೂಕಾ ಅಧ್ಯಕ್ಷ ರಾಜಣ್ಣ ಕಳ್ಳಿ, ರಮೇಶ ಲಮಾಣಿ, ರವಿ ಲಮಾಣಿ, ಲಕ್ಷ್ಮಣ ಲಮಾಣಿ, ಸಂತೋಷ ರಾಠೋಡ ತಿಪ್ಪಣ್ಣ ಲಮಾಣಿ, ಬಸವರಾಜ ಲಮಾಣಿ, ರುದ್ರಪ್ಪ ಲಮಾಣಿ ಯಲ್ಲಪ್ಪ ವಡ್ಡರ, ಫಕ್ಕೀರಪ್ಪ ದೊಡ್ಡಮನಿ, ದುರ್ಗಣ್ಣ ವಡ್ಡರ, ಮಹೇಶ ಲಮಾಣಿ, ಮುತ್ತು ಲಮಾಣಿ, ಕಿರಣ ಲಮಾಣಿ, ಸುರೇಶ ಲಮಾಣಿ, ಮಹೇಶ ರಾಠೋಡ, ವಿನೋದ ಲಮಾಣಿ, ಕೃಷ್ಣ ಲಮಾಣಿ ಮತ್ತಿತರಿದ್ದರು.

> ಮೀಸಲಾತಿಯ ಆಶಯವಾದ ಸಾಮಾಜಿಕ, ಶೈಕ್ಷಣಿಕ ಮೂಲ ಮಾನದಂಡಗಳನ್ನು ಕಡೆಗಣಿಸಿ ಕೇವಲ ಜನಸಂಖ್ಯೆ ಆಧಾರದ ಮೇಲೆ ಹಿಂದುಳಿದಿರುವಿಕೆ ಗುರುತಿಸಲಾಗುತ್ತಿದೆ. ಈ ಒಳಮೀಸಲಾತಿ ಜಾರಿ ಮಾಡುವ ನಿರ್ಧಾರವನ್ನು ಸರಕಾರ ಕೈಬಿಡಬೇಕು. ಇಲ್ಲದಿದ್ದಲ್ಲಿ ದೊಡ್ಡ ಮಟ್ಟದಲ್ಲಿ ಹೋರಾಟ ನಡೆಸಲಾಗುವದು ಎಂದು ಹೇಳಿದರು.

## ಶಾಲಾ ಕೊಠಡಿ ಉದ್ಘಾಟಿಸಿದ ಸಚಿವ ಡಾ. ಎಚ್.ಕೆ. ಪಾಟೀಲ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಗಿಮಡಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ, ಲೋಕೋಪಯೋಗಿ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ 2022-23ನೇ ಸಾಲಿನ ವಿವೇಕ ಯೋಜನೆಯಡಿ ನಿರ್ಮಿಸಲಾದ ಸರಕಾರಿ ಉರ್ದು ಹಿರಿಯ ಪ್ರಾಥಮಿಕ ಗಂಡು ಮಕ್ಕಳ ಶಾಲೆ ನಂ. 7ರ ನೂತನ 2 ಕೊಠಡಿಗಳನ್ನು ಬುಧವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ರವಿ ಕಮತರ, ಕೆಡಿಪಿ ಸಮಿತಿಯ ಸದಸ್ಯರಾದ ಎಸ್. ಎನ್. ಬಳ್ಳಾರಿ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಎಸ್‌ಡಿಎಂಸಿ ಅಧ್ಯಕ್ಷ ರಿಯಾಜ್ ಅಹಮ್ಮದ್ ಗುಡಸಲಮನಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಬಿಇಓ ಮಂಗಳಾ ತಾಪಸ್ಕರ, ಶಾಲಾ ಮುಖ್ಯೋಪಾಧ್ಯಾಯೆ ಎಸ್.ಆರ್. ಚಾಹುಸೇನ್, ಬಿಆರ್‌ಪಿ ಪ್ರಕಾಶ ಮಂಗಳೂರು ಮುಂತಾದವರು ಹಾಜರಿದ್ದರು.

## ವಿಧಾನಸಭಾ ಕ್ಷೇತ್ರವಾರು ಕರಡು ಮತದಾರರ ಯಾದಿ ಪ್ರಕಟ

# ಅಕ್ಷೇಪಣೆ ಸಲ್ಲಿಸಲು ನ. 28 ಕೊನೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ದಿ: 01-01-2025 ರನ್ನು ಅರ್ಹ ದಿನಾಂಕವೆಂದು ಪರಿಗಣಿಸಿ ವಿಧಾನಸಭಾ ಕ್ಷೇತ್ರಗಳ ಮತದಾರರ ಯಾದಿಗಳನ್ನು ವಿಶೇಷ ಸಂಕ್ಷಿಪ್ತ ಪರಿಷ್ಕರಣೆಯನ್ನು ಪರಿಷ್ಕರಿಸುವ ಬಗ್ಗೆ ಆಯೋಗವು ವೇಳಾ ಪಟ್ಟಿಯನ್ನು ಹೊರಡಿಸಿದ್ದಾರೆ.

ಈ ವೇಳಾಪಟ್ಟಿ ಅನ್ವಯ ಗದಗ ಜಿಲ್ಲೆ ವಿಧಾನಸಭಾ ಕ್ಷೇತ್ರಗಳಾದ 65-ಶಿರಹಟ್ಟಿ (ಪ.ಜಾ), 66-ಗದಗ, 67-ರೋಣ ಮತ್ತು 68-ನರಗುಂದ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಕರಡು ಮತದಾರರ ಯಾದಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿ, ಉಪ ವಿಭಾಗಾಧಿಕಾರಿಗಳ ಕಚೇರಿ, ತಹಸೀಲ್ದಾರರ ಕಚೇರಿಗಳಲ್ಲಿ ಹಾಗೂ ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್ www.ceokarnataka.kar.nic.in ನೇದ್ದರಲ್ಲಿ ದಿ: 29.10.2024 ರಂದು ಪ್ರಕಟಿಸಲಾಗಿದೆ.

ದಿನಾಂಕ: 01-01-2025 ಕ್ಕೆ ಇರುವಂತೆ 18 ವರ್ಷ ವಯಸ್ಸು ಪೂರ್ಣಗೊಂಡಿರುವವರು. ಮತದಾರರ ಯಾದಿಗಳಲ್ಲಿ ಹೆಸರು ಇಲ್ಲದವರು ಈ ಅವಧಿಯಲ್ಲಿ ತಮ್ಮ ಹೆಸರುಗಳನ್ನು ನಮೂನೆ ನಂ. 6 ರಲ್ಲಿ ಸಲ್ಲಿಸಬಹುದು. ಹಾಗೂ 2025ನೇ ವರ್ಷದ ಅರ್ಹತಾ ದಿನಾಂಕಗಳಾದ 1ನೇ ಎಪ್ರಿಲ್, 2025, 1ನೇ ಜುಲೈ, 2025 ಅಥವಾ ಅಕ್ಟೋಬರ್, 2025 ನೇದ್ದಕ್ಕೆ 18 ವರ್ಷ ವಯಸ್ಸು ಪೂರ್ಣಗೊಳ್ಳುವವರು, ಕರಡು ಮತದಾರ ಪಟ್ಟಿ ಪ್ರಕಟಣೆ ದಿನಾಂಕದಿಂದ ನಮೂನೆ 6 ರಲ್ಲಿ ಸೇರ್ಪಡೆಗೊಳಿಸಲು ಅರ್ಜಿ ಸಲ್ಲಿಸಬಹುದಾಗಿದೆ.

ಇಂತಹ ಅರ್ಜಿಗಳನ್ನು ಆಯಾ ತ್ರೈಮಾಸಿಕಗಳಲ್ಲಿ ಅರ್ಹತೆಯನ್ನು ಪರಿಶೀಲಿಸಿ ನಿಯಮಾನುಸಾರ ನೋಂದಣಿ ಮಾಡಿಕೊಳ್ಳಲಾಗುವುದು.

ಮತದಾರ ಪಟ್ಟಿಯಲ್ಲಿ ಹೊಸದಾಗಿ ಹೆಸರನ್ನು ಸೇರ್ಪಡೆ ಮಾಡಲು ನಮೂನೆ 6 ರಲ್ಲಿ ಅರ್ಜಿ ಸಲ್ಲಿಸುವ ಅರ್ಜಿದಾರನು ಅರ್ಜಿಗೆ ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಪೋಟೋ ಹಾಗೂ ವಿಳಾಸದ ಬಗ್ಗೆ ದಾಖಲೆಗಳು ಹಾಗೂ ವಯಸ್ಸಿನ ಬಗ್ಗೆ ದಾಖಲೆಗಳನ್ನು ನೀಡಲು ತಿಳಿಸಲಾಗಿದೆ.

ಮತದಾರರ ಪಟ್ಟಿಯಿಂದ ಹೆಸರನ್ನು ತೆಗೆದು ಹಾಕುವ ಸಲುವಾಗಿ ನಮೂನೆ 7 ರಲ್ಲಿ ಅರ್ಜಿ ಸಲ್ಲಿಸುವುದು.

ಮತದಾರರ ನಿವಾಸ ಬದಲಾವಣೆಯಿದ್ದಲ್ಲಿ (ಮತದಾರ ಪಟ್ಟಿಯ ಒಂದು ಭಾಗದಿಂದ ಇನ್ನೊಂದು ಭಾಗಕ್ಕೆ ಸ್ಥಳಾಂತರವಾಗಿದ್ದಲ್ಲಿ), ಪ್ರಸ್ತುತ ಮತದಾರರ ಪಟ್ಟಿಯಲ್ಲಿರುವ ನಮೂದುಗಳ ಸರಿಪಡಿಸಬೇಕಾಗಿದ್ದಲ್ಲಿ, ಯಾವುದೇ ತಿದ್ದುಪಡಿಗಳಿಲ್ಲದೆ ಬದಲಿ ಮತದಾರರ ಗುರುತಿನ ಚೀಟಿ (ಎಪಿಕ್) ಅವಶ್ಯಕತೆ ಇದ್ದಲ್ಲಿ ಅಥವಾ ಅಂಗವಿಕಲ ವ್ಯಕ್ತಿ ಎಂದು ಗುರುತಿಸುವುದಕ್ಕೆ ಮನವಿ ಸಲ್ಲಿಸಬೇಕಾಗಿದ್ದಲ್ಲಿ ನಮೂನೆ 8 ರಲ್ಲಿ ಮೇಲ್ಕಾಣಿಸಿದ ಅವಧಿಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಕರಡು ಮತದಾರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ವಿಎಚ್‌ಎ ಮೊಬೈಲ್ ಆ್ಯಪ್ ಮುಖಾಂತರ ಅಥವಾ www.voters.eci.gov.in ರ ಮುಖಾಂತರ ಅಥವಾ ತಮ್ಮ ಕ್ಷೇತ್ರಕ್ಕೆ ಸಂಬಂಧಿಸಿದ ಮತಗಟ್ಟೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮತಗಟ್ಟೆ ಮಟ್ಟದ ಅಧಿಕಾರಿಗಳು, ಉಪ ವಿಭಾಗಾಧಿಕಾರಿಗಳ ಕಾರ್ಯಾಲಯ, ಸಂಬಂಧಪಟ್ಟ ತಹಸೀಲ್ದಾರರ ಕಾರ್ಯಾಲಯಗಳಲ್ಲಿ ನವೆಂಬರ್ 28 ರವರೆಗೆ ಸ್ವೀಕರಿಸಲಾಗುವುದು.

ಸದರಿ ದಿನಾಂಕಗಳಂದು ಸ್ವೀಕೃತವಾಗುವ ಹಕ್ಕು ಮತ್ತು ಆಕ್ಷೇಪಣೆಗಳನ್ನು ನಿಯಮಾನುಸಾರ ವಿಲೇವಾರಿ ಮಾಡಿ ಚುನಾವಣಾ ಆಯೋಗದ ನಿರ್ದೇಶನದಂತೆ ಅಂತಿಮ ಮತದಾರರ ಪಟ್ಟಿಯನ್ನು ದಿ. 06.01.2025 ರಂದು ಅಂತಿಮ ಮತದಾರ ಪಟ್ಟಿಗಳನ್ನು ಪ್ರಕಟಿಸಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ರೀಡಾಕೂಟದಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಿಸಿಎನ್ ಸ್ಪೆಕ್ಟ್ರಂ ಇಂಗ್ಲೀಷ್ ಮೀಡಿಯಂ ಶಾಲೆಯ 7ನೇ ತರಗತಿ ವಿದ್ಯಾರ್ಥಿನಿ ದಿವ್ಯಶ್ರೀ ಚ.ಕಟ್ಟಿಮನಿ ಇತ್ತೀಚೆಗೆ ಗದುಗಿನಲ್ಲಿ ನಡೆದ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಉದ್ದ ಜಿಗಿತ ಮತ್ತು 100 ಮೀ ಓಟದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ವಿದ್ಯಾರ್ಥಿನಿಯ ಸಾಧನೆಗೆ ಶಾಲಾ ಆಡಳಿತ ಮಂಡಳಿಯ ನಿರ್ದೇಶಕರಾದ ಲೋಹಿತ ನೆಲವಗಿ, ಪ್ರಾಚಾರ್ಯರು, ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದೆ.

# ಶುಶ್ರೂಷಕರ ಪಾತ್ರ ದೊಡ್ಡದು

■ವಿಜಯಸಾಕ್ಷಿ ಸುದ್ದಿ, ಗದಗ

ಆಸ್ಪತ್ರೆಗೆ ಬರುವ ರೋಗಿಗಳನ್ನು ಆರೈಕೆ ಮಾಡಿ ಶೀಘ್ರ ಗುಣಮುಖರಾಗಿಸುವಲ್ಲಿ ವೈದ್ಯರಷ್ಟೇ ಸೇವೆ ಮಾಡುವ ಶುಶ್ರೂಷಕರ ಪಾತ್ರ ದೊಡ್ಡದಾಗಿದೆ. ಆದ್ದರಿಂದ ಆರೋಗ್ಯ ಕ್ಷೇತ್ರದಲ್ಲಿ ಸೇವೆ ಮಾಡುವವರು ದೇವರ ಸಮಾನರು ಎಂದು ಡಾ. ವಿ.ಎಸ್.ವಿ ಪ್ರಸಾದ ಹೇಳಿದರು.



ಅವರು ಸಂಕನೂರ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜಿನ ಬಿ.ಎಸ್‌ಸಿ ನರ್ಸಿಂಗ್ 3ನೇ ಬ್ಯಾಚ್‌ನ ಶೈಕ್ಷಣಿಕ ಪ್ರಾರಂಭೋತ್ಸವ ಉದ್ಘಾಟಿಸಿ ಮಾತನಾಡಿದರು.

ಅತಿಥಿಗಳಾಗಿ ಆಗಮಿಸಿದ ಹುಬ್ಬಳ್ಳಿಯ ಸನಾ ಇನ್‌ಸ್ಟಿಟ್ಯೂಟ್ ಆಫ್ ಹೆಲ್ತ್ ಸೈನ್ಸ್‌ನ ಪ್ರಾಚಾರ್ಯ ಮಹೇಶ ಗದಗ ಮಾತನಾಡಿ, ವಿದ್ಯಾರ್ಥಿಗಳಿಗೆ ನರ್ಸಿಂಗ್ ಕೋರ್ಸಿನ ಮಹತ್ವವನ್ನು ತಿಳಿಸಿ, ಪಠ್ಯ ಜ್ಞಾನದ ಮೂಲಕ ಕೌಶಲ್ಯಕ್ಕೆ ಹೆಚ್ಚು ಒತ್ತು ನೀಡಿ ಜ್ಞಾನ ಸಂಪಾದನೆ ಮಾಡಬೇಕೆಂದು ಹೇಳಿದರು.

ಮಹೇಶ ಗೋರ್ಪಡೆ ಮಾತನಾಡಿ, ನರ್ಸಿಂಗ್ ಕೋರ್ಸ್ ಮುಗಿಸಿದ ವಿದ್ಯಾರ್ಥಿಗಳಿಗೆ ಸಾಕಷ್ಟು ಉದ್ಯೋಗ ಅವಕಾಶಗಳು ಲಭ್ಯವಿವೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಪ್ರಾಮಾಣಿಕತೆ, ಪರಿಶ್ರಮ, ಇಚ್ಛಾಶಕ್ತಿಯನ್ನು ಹೊಂದಿರಬೇಕು. ಅಂದಾಗ ಮಾತ್ರ ಯಾವುದೇ ವೃತ್ತಿಯಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದು ತಿಳಿಸಿದರು.

ವೇದಿಕೆ ಮೇಲೆ ಡಾ. ಪ್ರಕಾಶ ಸಂಕನೂರ, ಡಾ. ಶ್ವೇತಾ ಸಂಕನೂರ, ಡಾ. ರಾಜೇಶ ಜನ್ನಾ ಪ್ರಾಚಾರ್ಯರಾದ ಶ್ರೀಮತಿ ದೇವಾಂಗಮಠ, ಸುಭಾಷ ಸಂಕನೂರ, ಅಂದಪ್ಪ ಸಂಕನೂರ ಉಪಸ್ಥಿತರಿದ್ದರು.

ರಶ್ಮಿ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ವಿನ್ಸೆಂಟ್ ಪಾಟೀಲ ವಂದಿಸಿದರು.

## ವಾಣಿಜ್ಯೋದ್ಯಮ ಸಂಸ್ಥೆಯ ಪದಾಧಿಕಾರಿಗಳಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಎ.ಪಿ.ಎಂ.ಸಿ. ವಾಕಿಂಗ್ ಮಿತ್ರ ಮಂಡಳಿ ವತಿಯಿಂದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 2023-24ನೇ ಸಾಲಿನ ಅಧ್ಯಕ್ಷರಾಗಿ ಆಯ್ಕೆಯಾದ ತಾತನಗೌಡ ಪಾಟೀಲ, ಕಾರ್ಯದರ್ಶಿಗಳಾಗಿ ಆಯ್ಕೆಯಾದ ಅಶೋಕ ಪಾಟೀಲ ಹಾಗೂ ಕೋಶಾಧ್ಯಕ್ಷರಾಗಿ ಆಯ್ಕೆಯಾದ ಸಂಜಯ ಬಾಗಮಾರ ಇವರುಗಳಿಗೆ ಹುಲಕೋಟಿಯ ಬಳ್ಳಾರಿಯವರ ಫಾರ್ಮ್ ಹೌಸ್‌ನಲ್ಲಿ ಸನ್ಮಾನಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಮಂಡಳಿಯ ಅಧ್ಯಕ್ಷ ಚನ್ನವೀರಪ್ಪ ಹುಣಸಿಕಟ್ಟಿ ಮಾತನಾಡಿ, ಸಂಸ್ಥೆಯ ಅಧ್ಯಕ್ಷರಾಗಿರುವ ತಾತನಗೌಡ ಪಾಟೀಲರ ಅವಧಿಯಲ್ಲಿ ಗದಗ ಎ.ಪಿ.ಎಂ.ಸಿ. ವಾಕಿಂಗ್ ಮಿತ್ರ ಮಂಡಳಿ ವತಿಯಿಂದ ಎಲ್ಲ ರೀತಿಯ ಸಹಕಾರವನ್ನು ನೀಡುವುದಾಗಿ ತಿಳಿಸಿದರು.

ಮುರುಗೇಶ ಬಡ್ನಿ ಪ್ರಾಸ್ತಾವಿಕವಾಗಿ ಮಾತನಾಡಿ, ತಾತನಗೌಡ ಪಾಟೀಲರು ನಮ್ಮ ದಲಾಲ ವರ್ತಕರ ಸಂಘದ ಮಾಜಿ ಅಧ್ಯಕ್ಷರಾಗಿದ್ದು, ಅನೇಕ ಸಂಘ-ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿರುವುದರಿಂದ ಈ ವರ್ಷ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯನ್ನು ಯಶಸ್ಸಿನತ್ತ ಕೊಂಡೊಯ್ಯಲಿ ಎಂದು ಶುಭ ಹಾರೈಸಿದರು.

ಸಂಸ್ಥೆಯ ಮಾಜಿ ಅಧ್ಯಕ್ಷ ಮಧುಸೂಧನ ಪುಣೇಕರ, ದಲಾಲ ವರ್ತಕರ ಸಂಘದ ಮಾಜಿ ಅಧ್ಯಕ್ಷ ಮಂಜುನಾಥ ಬೇಲೇರಿ, ರಸಗೊಬ್ಬರ ವ್ಯಾಪಾರಸ್ಥ ಸಿದ್ಧಣ್ಣ ಹಲವಾಗಲಿ, ಖ್ಯಾತ ರಫ್ತುದಾರರಾದ ಶರಣು ಗದಗ ಮಾತನಾಡಿ ಶುಭ ಹಾರೈಸಿದರು.

ಕಾರ್ಯಕ್ರಮದ ಆತಿಥ್ಯವನ್ನು ಲಯನ್ಸ್ ಕ್ಲಬ್ ಮಾಜಿ ಅಧ್ಯಕ್ಷ ರಮೇಶ ಶಿಗ್ಲಿಯವರು ವಹಿಸಿಕೊಂಡಿದ್ದರು. ಪ್ರಕಾಶ ಉಗಲಾಟದ ಸರ್ವರನ್ನು ಸ್ವಾಗತಿಸಿ, ವಂದಿಸಿದರು. ಸಭೆಯಲ್ಲಿ ಚಂದ್ರು ಸುರಕೋಡ, ವಿಶ್ವನಾಥ ಯಳಮಲಿ, ಉಮೇಶ ನಾಲ್ವಾಡ, ಸುರೇಶ ರಡ್ಡೇರ, ಮಹಾಂತೇಶ ಪಾಟೀಲ, ಸಿದ್ಧಣ್ಣ ಮುನವಳ್ಳಿ, ರಾಜು ಮಲ್ಲಾಡದ ಅರವಿಂದ ಕಾಮತ, ಬಾಪುಗೌಡ ಸಂಕನಗೌಡ, ವಿಜಯ ಶಿವಪ್ಪಗೌಡ್ರ, ವಿಜಯ ಗೊಡಚಿ, ವಿರುಪಾಕ್ಷಯ್ಯ ಹಿರೇಮಠ, ರೇಣುಕಾಪ್ರಸಾದ ಹಿರೇಮಠ, ಮೌಲಾಲಿ ಮುಲ್ಲಾನವರ, ಬಾಬುಗೌಡ ಬಾಪುಗೌಡ್ರ, ಮುಂತಾದವರು ಉಪಸ್ಥಿತರಿದ್ದರು.

# ಪ.ಪಂ ವತಿಯಿಂದ ಕನ್ನಡ ಬಾವುಟ ವಿತರಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕರ್ನಾಟಕ ರಾಜ್ಯೋತ್ಸವ ಕನ್ನಡಿಗರೆಲ್ಲರ ಹಬ್ಬ. ಕನ್ನಡ ರಾಜೋತ್ಸವವು ಕನ್ನಡ ನಾಡಿನ ಅಸ್ಮಿತೆಯಾಗಿದೆ. ಕನ್ನಡ ರಾಜ್ಯೋತ್ಸವವನ್ನು ವಿಧಾಯಕವಾಗಿ ಆಚರಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಪ.ಪಂ ಅಧ್ಯಕ್ಷ ಫಕ್ಕೀರಪ್ಪ ಮಳ್ಳಿ ಹೇಳಿದರು.

ಪಟ್ಟಣ ಪಂಚಾಯಿತಿ ಸಭಾ ಭವನದಲ್ಲಿ ಮಂಗಳವಾರ 1 ಸಾವಿರ ಕನ್ನಡ ಬಾವುಟಗಳನ್ನು ವಿತರಿಸಿ ಅವರು ಮಾತನಾಡಿದರು.

ಈ ವರ್ಷ ವಿಶೇಷವಾಗಿ ನವೆಂಬರ್ 1ರಂದು ನರೇಗಲ್ಲ ಪ.ಪಂ ವತಿಯಿಂದ 1 ಸಾವಿರ



ಕನ್ನಡ ಬಾವುಟಗಳನ್ನು ಪ.ಪಂ ಸದಸ್ಯರ ನೇತೃತ್ವದಲ್ಲಿ ಮನೆ ಮನೆಗಳ ಮೇಲೆ ಹಾರಿಸುವ ಮೂಲಕ ವಿಶೇಷವಾಗಿ ಆಚರಿಸಲಾಗುತ್ತಿದೆ ಎಂದರು.

ನಿವೃತ್ತ ಶಿಕ್ಷಕ ಎಂ.ಎಸ್. ದಡೆಸೂರಮಠ ಮಾತನಾಡಿ, ಕನ್ನಡ ನಾಡಿನಲ್ಲಿ ಹುಟ್ಟಿದ ನಾವು ಪುಣ್ಯವಂತರು. ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಮುಂದಿನ ಜನಾಂಗಕ್ಕೆ ಪರಿಚಯಿಸುವ ಕಾರ್ಯವಾಗಬೇಕಿದೆ. ಭಾಷಾಭಿಮಾನ ಎಲ್ಲರಲ್ಲಿ ಮೂಡಬೇಕಿದೆ. ಎಲ್ಲರೂ ಕನ್ನಡತನವನ್ನು ಬೆಳೆಸಿಕೊಳ್ಳುವ ಮೂಲಕ ಕನ್ನಡವನ್ನು ಉಳಿಸುವ ಕಾರ್ಯವನ್ನು ಮಾಡಬೇಕು ಎಂದರು.

ಉಪಾಧ್ಯಕ್ಷ ಕುಮಾರಸ್ವಾಮಿ ಕೊರಧಾನ್ಯಮಠ. ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ, ಕನ್ನಡ ಜಾನಪದ ಪರಿಷತ್ ತಾಲೂಕಾಧ್ಯಕ್ಷ ಮಹಾದೇವ ಬೇವಿನಕಟ್ಟಿ, ಕಸಾಪ ತಾಲೂಕಾ ಕಾರ್ಯದರ್ಶಿ ಬಸವರಾಜ್ ಕುರಿ, ಬೀಚಿ ಬಳಗದ ಸಂಚಾಲಕ ಈಶ್ವರ ಬೆಟಗೇರಿ, ಮುಖಂಡರಾದ ಶಿವನಗೌಡ ಪಾಟೀಲ, ನಿಂಗನಗೌಡ ಲಕ್ಕನಗೌಡ್ರ, ವೀರಪ್ಪ ಜೋಗಿ, ನಿಂಗಪ್ಪ ಚಲವಾದಿ, ಕಳಕನಗೌಡ ಪಾಟೀಲ, ಅಲ್ಲಾಭಕ್ಷಿ ನದಾಫ್, ಗುಡದಪ್ಪ ಗೋಡಿ, ಶೇಖಪ್ಪ ಕೆಂಗಾರ, ಸಕ್ರಪ್ಪ ಹಡಪದ, ಮುಖ್ಯಾಧಿಕಾರಿ ಮಹೇಶ್ ನಿಡಶೇಶಿ, ಶಂಕ್ರಪ್ಪ ದೊಡ್ಡಣ್ಣವರ, ವಿ.ವೈ. ಮಡಿವಾಳರ, ರಮೇಶ ಹಲಗಿ, ಎಂ.ಎಚ್. ಸೀತಿಮನಿ ಸೇರಿದಂತೆ ಪ.ಪಂ ಸಿಬ್ಬಂದಿ ಇದ್ದರು.

ಎನ್‌ಎಸ್‌ಎಸ್, ರೆಡ್ ರಿಬ್ಬನ್ ಕ್ಲಬ್ ವಿದ್ಯಾರ್ಥಿಗಳಿಂದ ಹೆಚ್.ಐ.ವಿ. ಏಡ್ಸ್ ಅರಿವು ಕಾರ್ಯಕ್ರಮ

# ಸಮುದಾಯದಲ್ಲಿ ಏಡ್ಸ್ ಜಾಗೃತಿ ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಗದಗ ಜಿಲ್ಲೆಯ ಆದರ್ಶ ಶಿಕ್ಷಣ ಸಮಿತಿಯ ಎನ್.ಎಸ್.ಎಸ್. ಹಾಗೂ ರೆಡ್ ರಿಬ್ಬನ್ ಕ್ಲಬ್‌ಗಳ ಸಂಯುಕ್ತ ಆಶ್ರಯದಲ್ಲಿ ಹೆಚ್.ಐ.ವಿ/ಏಡ್ಸ್ ತಡೆಗಟ್ಟಲು ತೀವ್ರತರವಾದ ಐ.ಇ.ಸಿ ಪ್ರಚಾರಾಂದೋಲನ–2024ರ ಅಂಗವಾಗಿ ರೆಡ್ ರಿಬ್ಬನ್ ಕಾಲೇಜು ವಿದ್ಯಾರ್ಥಿಗಳಿಂದ ಫ್ಲ್ಯಾಶ್ ಮೊಬ್ ಮೂಲಕ ಹೆಚ್.ಐ.ವಿ. ಏಡ್ಸ್ ಅರಿವು ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳಾದ ಡಾ. ಅರುಂಧತಿ ಕುಲಕರ್ಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಹೆಚ್.ಐ.ವಿ. ಏಡ್ಸ್ ತಡೆಗಟ್ಟುವಲ್ಲಿ ಯುವಕರ ಪಾತ್ರ ಮುಖ್ಯವಾಗಿದ್ದು, ಎಲ್ಲ ಯುವಕರು ತ್ವರಿತಗತಿಯಲ್ಲಿ ಹೆಚ್.ಐ.ವಿ. ಬಗ್ಗೆ ಪ್ರಚಾರ ಮಾಡಿ, ಫ್ಲ್ಯಾಶ್ ಮೊಬ್, ಬೀದಿ ನಾಟಕ ಹಾಗೂ ಸಂಗೀತ ಕಲಾ ಪ್ರದರ್ಶನಗಳ ಮೂಲಕ ಹೆಚ್.ಐ.ವಿ. ಏಡ್ಸ್ ಅರಿವನ್ನು ಸಮುದಾಯದಲ್ಲಿ ಮೂಡಿಸಬೇಕಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಡಾ. ಕೆ. ಗಿರಿರಾಜ ಕುಮಾರ ಮಾತನಾಡಿ, ವಿದ್ಯಾರ್ಥಿಗಳು ಯೌವನದಲ್ಲಿ ತಮ್ಮ ಜೀವನವನ್ನು ಜೋಪಾನ ಮಾಡಿಕೊಂಡು ಆರೋಗ್ಯಕರ ನಡುವಳಿಕೆಗಳನ್ನು ರೂಪಿಸಿಕೊಳ್ಳಲು ಕರೆ ನೀಡಿದರು.




ಯುವಕರು ಸಂಯಮದಿಂದ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸಧೃಢ ಆರೋಗ್ಯವನ್ನು ಹೊಂದಿ ಸಮೃದ್ಧ ಭಾರತವನ್ನು ನಿರ್ಮಾಣ ಮಾಡಲು ಕೈಗೂಡಿಸಬೇಕು. ಪ್ರಚಾರಾಂದೋಲನ ಮತ್ತು ಫ್ಲ್ಯಾಶ್ ಮೊಬ್‌ದ ಉದ್ದೇಶ ಹೆಚ್.ಐ.ವಿ ಏಡ್ಸ್ ಬಗ್ಗೆ ಅರಿವು, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ಮತ್ತು ತಾರತಮ್ಯವನ್ನು ತಡೆಗಟ್ಟುವುದು, ಹೆಚ್.ಐ.ವಿ.ಏಡ್ಸ್ ತಡೆ ಕಾಯ್ದೆ–2017, ನ್ಯಾಕೋ ಏಡ್ಸ್ ಆ್ಯಪ್, ಉಚಿತ ಸಹಾಯವಾಣಿ–1097, ಎಸ್,ಟಿ.ಐ. ಖಾಯಿಲೆಗಳು ಇತಾದಿ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಈ ಸ್ಪರ್ಧೆಯ ಉದ್ದೇಶ ಎಂದು ಡಾ. ಅರುಂಧತಿ ಕುಲಕರ್ಣಿ ಹೇಳಿದರು.

ಬಸವರಾಜ ಲಾಳಗಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ತೀವ್ರತರದ ಹೆಚ್.ಐ.ವಿ. ಏಡ್ಸ್ ತಡೆಗಟ್ಟುವ ಪ್ರಾಚಾರಾಂದೋಲನ–2024ರ ಗುರಿ ಹಾಗೂ ಉದ್ದೇಶಗಳನ್ನು ತಿಳಿಸುತ್ತಾ, ನವೀನ ತಂತ್ರಜ್ಞಾನಗಳ ಮೂಲಕ ಅಂದರೆ ರೀಲ್ಸ್, ಫ್ಲ್ಯಾಶ್ ಮೊಬ್, ಜಾನಪದ ಕಲೆ ಮೂಲಕ ಪ್ರಚಾರ ಮಾಡುವ್ಯದರಿಂದ ಬಹಳಷ್ಟು ಜನರಿಗೆ ತಲುಪುವ ವಿಶ್ವಾಸವಿದೆ ಎಂದರು.

ಫ್ಲ್ಯಾಶ್ ಮೊಬ್ ಜನ ಜಾಗೃತಿ ಕಾರ್ಯಕ್ರಮದಲ್ಲಿ ಕಾಲೇಜಿನ ಉಪ ಪ್ರಾಚಾರ್ಯರಾದ ಡಾ. ವಿ.ಟಿ. ನಾಯ್ಕರ, ಪ್ರೊ. ಸಲ್ಮಾ, ಪ್ರೊ. ಪ್ರಿಯಾಂಕಾ, ಪ್ರೊ. ವೀಣಾ ಪತ್ರಿ, ವಿದ್ಯಾರ್ಥಿ ಪ್ರತಿನಿಧಿ ಜನಕರೆಡ್ಡಿ, ಎನ್,ಎಸ್.ಎಸ್ ಸ್ವಯಂ ಸೇವಕರು, ಕಾಲೇಜು ಸಿಬ್ಬಂದಿ, ಆರೋಗ್ಯ ಇಲಾಖೆಯ ಸಿಬ್ಬಂದಿ ರವಿ ಪತ್ತಾರ ಹಾಜರಿದ್ದರು. ಪ್ರೊ. ಬಾಹುಬಲಿ ಜೈನರ್ ಸ್ವಾಗತಿಸಿದರು.

## ಲಕ್ಷ್ಮೇಶ್ವರ ಪುರಸಭೆ ವಾರ್ಡ್ ನಂ. 13ಕ್ಕೆ ಉಪ ಚುನಾವಣೆ ವೇಳಾಪಟ್ಟಿ ಪ್ರಕಟಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಚುನಾವಣಾ ಆಯೋಗದ ಆದೇಶದನ್ವಯ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಪುರಸಭೆಯ ವಾರ್ಡ್ ನಂ. 13 ರ ತೆರವಾದ ಸ್ಥಾನಕ್ಕೆ ಉಪ ಚುನಾವಣೆಯನ್ನು ಜರುಗಿಸಲು ವೇಳಾಪಟ್ಟಿ ಪ್ರಕಟಿಸಲಾಗಿದೆ.

ಲಕ್ಷ್ಮೇಶ್ವರ ಪುರಸಭೆಯ ವಾರ್ಡ್ ನಂ. 13 ರ ಉಪಚುನಾವಣೆಯ ಸದಸ್ಯ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಾಗಿರಸಿದೆ. ನವೆಂಬರ್ 4 ರಿಂದ 11 ರವರೆಗೆ ಸಾರ್ವತ್ರಿಕ ರಜೆಗಳನ್ನು ಹೊರತುಪಡಿಸಿ ಬೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆಯುವರೆಗೆ ಪುರಸಭೆ, ಲಕ್ಷ್ಮೇಶ್ವರ ಕಾರ್ಯಾಲಯದಲ್ಲಿ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಬಹುದಾಗಿದೆ. ನಾಮಪತ್ರಗಳ ಪರಿಶೀಲನೆ ನವೆಂಬರ್ 12 ರಂದು ಕೈಗೊಳ್ಳಲಾಗುವುದು. ಉಮೇದುವಾರಿಕೆಯನ್ನು ನವೆಂಬರ್ 14 ರ ಮಧ್ಯಾಹ್ನ 3 ಗಂಟೆಯೊಳಗೆ ಹಿಂತೆಗೆದುಕೊಳ್ಳಬಹುದಾಗಿದೆ.

ಮತದಾನವನ್ನು ನವೆಂಬರ್ 23 ರಂದು ಬೆ 7 ಗಂಟೆಯಿಂದ ಸಂಜೆ 5 ಗಂಟೆಯುವರಗೆ ಜರುಗಿಸಲಾಗುವುದು. ಮತಗಳ ಎಣಿಕೆಯನ್ನು ನವೆಂಬರ್ 26 ಬೆ. 8 ಗಂಟೆಯಿಂದ ತಹಸೀಲ್ದಾರ ಕಾರ್ಯಾಲಯದಲ್ಲಿ ಕೈಗೊಳ್ಳಲಾಗುವುದು.

ಚುನಾವಣಾ ಪ್ರಕ್ರಿಯೆಯು ನವೆಂಬರ್ 26 ಕ್ಕೆ ಮುಕ್ತಾಯವಾಗುತ್ತದೆ. ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡ್ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು ನವೆಂಬರ್ 4 ರಿಂದ 26 ರವರೆಗೆ (ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೆ ) ಜಾರಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಗೋವಿಂದರೆಡ್ಡಿ ಅವರು ತಿಳಿಸಿದ್ದಾರೆ.

ಪಡಿತರ ಪಡೆಯಲು ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಸರಿಪಡಿಸಲು ಆಗ್ರಹಿಸಿ ಮನವಿ

# ಬಡವರ ಆತಂಕ ನಿವಾರಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಲ್ಲೆಯ ಬಿ.ಪಿ.ಎಲ್ ಕುಟುಂಬಗಳು ತಮ್ಮ ಆಹಾರ ಧಾನ್ಯ ಪಡೆದುಕೊಳ್ಳಲು ಅಂಡಿಗಳಿಗೆ ಹೋದಾಗ ಕಡ್ಡಾಯವಾಗಿ ಜಾತಿ ಮತ್ತು ಆದಾಯ ಪ್ರಮಾಣಪತ್ರ ತಂದು ಕೊಟ್ಟಾಗ ಮಾತ್ರ ಆಹಾರ ಧಾನ್ಯವನ್ನು ನೀಡುತ್ತೇವೆ ಎಂದು ಬಡ ಜನರಿಗೆ ಅಂಗಡಿಕಾರರು ಎಚ್ಚರಿಕೆ ನೀಡುತ್ತಿದ್ದಾರೆ. ಸರ್ಕಾರದ ಯಾವುದೇ ನಿರ್ದೇಶನ ಇಲ್ಲದೇ ಹಾಗೂ ಆಹಾರ ಇಲಾಖೆಯಿಂದ ಯಾವುದೇ ಸೂಚನೆ ಇಲ್ಲದೇ ಅಂಗಡಿಕಾರರು ಬಿಪಿಎಲ್ ಕುಟುಂಬಗಳಿಗೆ ಆಹಾರ ನೀಡಲು ನಿರಾಕರಿಸುತ್ತಿರುವುದ್ದರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಆತಂಕ ಸೃಷ್ಟಿಯಾಗಿದೆ. ಜಾತಿ ಮತ್ತು ಆದಾಯ ಕಡ್ಡಾಯ ಮಾಡದೇ ಆಹಾರ ಧಾನ್ಯವನ್ನು ವಿತರಣೆ ಮಾಡಲು ಸೂಚಿಸಬೇಕು ಎಂದು ಆಗ್ರಹಿಸಿ ಗದಗ ಜಿಲ್ಲಾ ಸ್ಲಂ ಸಮಿತಿಯ ನೇತೃತ್ವದಲ್ಲಿ ಆಹಾರ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಮನವಿ ನೀಡಿ ಒತ್ತಾಯಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ಬಿಪಿಎಲ್ ಕುಟುಂಬಗಳಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕೇಳುತ್ತಿರುವುದ್ದರಿಂದ ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿಯಾಗಿದೆ. ಯಾವುದೇ ಕಾರಣಕ್ಕೂ ಬಿಪಿಎಲ್ ಕಾರ್ಡ್‌ದಾರಿಗೆ ಜಾತಿ ಮತ್ತು ಆದಾಯ ಪ್ರಮಾಣಪತ್ರ ಕಡ್ಡಾಂಯುಗೊಳಿಸಬಾರದು ಎಂದರು.



ಸ್ಥಳೀಯ ನಿವಾಸ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಸತಿ ಯೋಜನೆ ಇನ್ನು ಹಲವಾರು ಸರ್ಕಾರದ ಯೋಜನೆಗಳಿಗೆ ಅರ್ಜಿ ಸಲ್ಲಿಸುವಾಗ ಪಡಿತರ ಚೀಟಿ ಗುರುತಿನ ಪುರಾವೆ ಆಗಿರುತ್ತದೆ. ಹಾಗಾಗಿ ಯಾವುದೇ ಕಾರಣಕ್ಕೂ ಬಡವರ ಆಧಾರಸ್ಥಂಭವಾಗಿರುವ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದುಗೊಳಿಸಬಾರದೆಂದು ಆಗ್ರಹಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ಮೌಲಾಸಾಬ ಗಚ್ಚಿ, ಬಾಷಾಸಾಬ ಡಂಬಳ, ದುರ್ಗಪ್ಪ ಮಣ್ಣವಡ್ಡರ, ಪ್ರೇಮಾ ಮಣವಡ್ಡರ, ಸುಶೀಲಮ್ಮ ಗೊಂದಾರ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಖಾಜೇಸಾಬ ಇಸ್ಮಾಯಿಲನವರ, ಮಕ್ತುಮಸಾಬ ಮುಲ್ಲಾನವರ, ಈರಮ್ಮ ಬೇವಿನಮರದ, ನಾಗರಾಜ ಮಣವಡ್ಡರ, ದಾದು ಗೋಸಾವಿ, ಖಾಜೇಸಾಬ ಬಳ್ಳಾರಿ, ಮಲೇಶಪ್ಪ ಕಲಾಲ, ಚಂದ್ರಪ್ಪ ಲಕ್ಕುಂಡಿ, ಶರಣಪ್ಪ ಬಿಂಗದಕಟ್ಟಿ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ನಾಳೆ ಹಲ್ಮಿಡಿ ಶಾಸನ ಪ್ರತಿಕೃತಿ ಲೋಕಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಹಲ್ಮಿಡಿ ಶಾಸನ ಪ್ರತಿಕೃತಿಯನ್ನು ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ.ಪಾಟೀಲ ಅವರು ನವೆಂಬರ್ 1 ರಂದು ಲೋಕಾರ್ಪಣೆಗೊಳಿಸುವರು.

ಕನ್ನಡದ ಮೊಟ್ಟ ಮೊದಲ ಉಪಲಬ್ಧ ಶಾಸನ ಹಲ್ಮಿಡಿ ಶಾಸನವಾಗಿದೆ. ಸುವರ್ಣ ಕರ್ನಾಟಕ ಸಂಭ್ರಮದ ಅಂಗವಾಗಿ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಏಕಕಾಲಕ್ಕೆ ನವೆಂಬರ್ 1 ರಂದು ಈ ಶಾಸನದ ಪ್ರತಿಕೃತಿ ಲೋಕಾರ್ಪಣೆಗೊಳಿಸುತ್ತಿರುವುದು ಕನ್ನಡಿಗರಿಗೆಲ್ಲ ಹೆಮ್ಮೆಯ ವಿಷಯವಾಗಿದೆ.

ಹಲ್ಮಿಡಿ ಶಾಸನ ಪ್ರತಿಕೃತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ. ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಆಗಮಿಸುವರು.

ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ , ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸ್ವಾಗತ ಕೋರಿದ್ದಾರೆ.

ಗೋಸಾವಿ ಸಮಾಜ, ಶ್ರೀರಾಮ ಸೇನೆ ವತಿಯಿಂದ ತಹಸೀಲ್ದಾರ ಕಚೇರಿಯೆದುರು ಧರಣಿ

# ಪಿಎಸ್‌ಐ ಈರಣ್ಣ ರಿತ್ತಿ ಅಮಾನತ್ತಿಗೆ ಪಟ್ಟು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷೇಶ್ವರ ಪಿಎಸ್‌ಐ ಈರಣ್ಣ ರಿತ್ತಿ ಅಮಾನತ್ತಿಗೆ ಆಗ್ರಹಿಸಿ ಪಟ್ಟಣದ ಗೋಸಾವಿ ಸಮಾಜ ಮತ್ತು ಶ್ರೀರಾಮ ಸೇನೆಯ ಕಾರ್ಯಕರ್ತರು ಬುಧವಾರ ತಹಸೀಲ್ದಾರ ಕಚೇರಿಯ ಮುಂದೆ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಕೈಗೊಂಡರು.

ಧರಣಿ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ ವಾಸುದೇವ ಎಂಸ್ವಾಮಿ ಮತ್ತು ಸಿಪಿಐ ನಾಗರಾಜ ಮಾಡಳ್ಳಿ, ಹಿರಿಯ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ಪಿಎಸ್‌ಐ ಈರಣ್ಣ ರಿತ್ತಿ ಬಗ್ಗೆ ವರದಿ ಸಿದ್ಧಪಡಿಸಲಾಗುತ್ತಿದ್ದು, ಸದ್ಯಕ್ಕೆ ಧರಣಿ ಕೈಬಿಡುವಂತೆ ತಿಳಿಸಿದರು. ಧರಣಿ ನಿರತ ಗೋಸಾವಿ ಸಮಾಜದ ಯುವಕ ಹರೀಶ ಗೋಸಾವಿ ಮತ್ತು ಶ್ರೀರಾಮಸೇನೆ ತಾಲೂಕಾಧ್ಯಕ್ಷ ಈರಣ್ಣ ಪೂಜಾರ ಪ್ರತಿಕ್ರಿಯಿಸಿ, ನ್ಯಾಯ ಕೇಳಲು ಮುಂದಾದರೆ ಗೋಸಾವಿ ಸಮಾಜ ಮತ್ತು ಶ್ರೀರಾಮ ಸೇನೆ ಕಾರ್ಯಕರ್ತರ ವಿರುದ್ಧ ತಮ್ಮ ಬೆಂಬಲಿಗರ ಮೂಲಕ ಹೆದರಿಸಿ–ಬೆದರಿಸುವ ಕಾರ್ಯ ಮಾಡುತ್ತಿದ್ದಾರೆ.

ಅಂದು 163 ಕಲಂ ಅಡಿ ಪ್ರತಿಬಂಧಕಾಜ್ಞೆಯನ್ನೂ ಜಾರಿಗೊಳಿಸಲಾಗಿತ್ತು. ಆದಾಗ್ಯೂ ಅವರ ಮೇಲೆ ಯಾವುದೇ ಕ್ರಮವಾಗಿಲ್ಲದ ಕಾರಣ ಅನಿರ್ದಿಷ್ಟಾವಧಿ ಧರಣಿ ಕೈಗೊಳ್ಳಬೇಕಾಗಿದೆ. ನಮ್ಮ ಮನವಿಗೆ ಸ್ಪಂದಿಸದಿದ್ದರೆ ದೀಪಾವಳಿ ಹಬ್ಬ ಮುಗಿಯುತ್ತಿದ್ದಂತೆಯೇ ಸಾವಿರಾರು ಶ್ರೀರಾಮಸೇನೆ ಕಾರ್ಯಕರ್ತರು, ಗೋಸಾವಿ ಸಮಾಜದವರು ಬೆಳಗಾವಿ ಸುವರ್ಣಸೌಧದಿಂದ ಐಜಿ ಕಚೇರಿಯವರೆಗೆ ಪ್ರತಿಭಟನಾ ಮೆರವಣಿಗೆ ಮಾಡಲಾಗುವುದು. ಅವರ ಮೇಲೆ ಕ್ರಮವಾಗುವರೆಗೂ ಶಾಂತ ರೀತಿಯಿಂದಲೇ ಧರಣಿ ನಡಸುತ್ತೇವೆ ಎಂದು ಹೇಳಿದರು.



ಗಣೇಶೋತ್ಸವ ಆಚರಣೆ ವೇಳೆಯೂ ವಿನಾಕಾರಣ ಹಿಂದೂ ಸಂಘಟನೆಯ ಕಾರ್ಯಕರ್ತರ ಮೇಲೆ ಹಲ್ಲೆ ಮಾಡಿದ್ದಾರೆ. ದ್ವೇಷ, ಹಗೆ ಸಾಧಿಸುವ ಮನೋಭಾವದ ಪಿಎಸ್‌ಐ ರಿತ್ತಿ ಅವರಿಂದ ಭಯದಲ್ಲಿ ಬದುಕುವಂತಾಗಿದೆ. ಅವರನ್ನು ಅಮಾನತ್ತು ಮಾಡಿ ಇಲ್ಲವೇ ಇಲ್ಲಿಂದ ವರ್ಗಾವಣೆಯಾದರೂ ಮಾಡಬೇಕೆಂದು ಅ.19ರಂದು ಲಕ್ಷ್ಮೇಶ್ವರ ಬಂದ್ ಮಾಡಿ ಪೊಲೀಸ್ ಇಲಾಖೆಯ ಗಮನಕ್ಕೆ ತರಲಾಗಿತ್ತು ಎಂದು ಪ್ರತಿಭಟನಾಕಾರರು ತಿಳಿಸಿದರು.

ಇದರಿಂದ ಅನಿವಾರ್ಯವಾಗಿ ಅಧಿಕಾರಿಗಳು ವಾಪಸ್ ಹೋಗಿದ್ದು, ಧರಣಿ ಮುಂದುವರೆದಿದೆ. ಮುಂಜಾಗೃತಾ ಕ್ರಮವಾಗಿ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ.

ಧರಣಿಯಲ್ಲಿ ಬಸವರಾಜ ಚಕ್ರಸಾಲಿ, ಪ್ರಾಣೇಶ ವ್ಯಾಪಾರಿ, ಮಲ್ಲಿಕಾಜುನ ಹಾಳದೋಟದ, ಗೋವಿಂದ ಗೋಸಾವಿ, ವಿಕ್ರಂ ಗೋಸಾವಿ, ರಾಜು ಗೋಸಾವಿ, ಹನಮಂತ ರಾಮಗೇರಿ, ಕಿಶನ್ ಗೋಸಾವಿ, ವೆಂಕಟೇಶ ಗೋಸಾವಿ, ಜ್ಯೋತಿ ಗೋಸಾವಿ, ಮಂಗಳಾ ಗೋಸಾವಿ, ಅಂಜಲಿ ತುಳಸಿ, ಪೂರ್ಣಿಮಾ ಗೋಸಾವಿ, ಆಶಾ ಗೋಸಾವಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ಕನ್ನಡ ಶಾಲೆಗಳ ಉಳಿವಿಗೆ ಮುಖ್ಯಮಂತ್ರಿಗಳು ದೃಢ ಸಂಕಲ್ಪ ಮಾಡಲಿ: ಬಸವರಾಜ ಹೊರಟ್ಟಿ

## ಅನ್ಯ ಭಾಷೆಯ ವ್ಯಾಮೋಹ ತೊಲಗಲಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ದಿನದಿಂದ ದಿನಕ್ಕೆ ಕನ್ನಡ ಶಾಲೆಗಳ ಸಂಖ್ಯೆ ಕಡಿಮೆ ಆಗುತ್ತಿರುವ ಈ ಸಂದರ್ಭದಲ್ಲಿ ಕನ್ನಡ ಶಾಲೆಗಳ ಉಳಿವಿಗಾಗಿ ಮುಖ್ಯಮಂತ್ರಿಗಳು ಧೃಢ ಸಂಕಲ್ಪ ಮಾಡಬೇಕು. ಆ ಮೂಲಕ 69ನೇ ಕನ್ನಡ ರಾಜ್ಯೋತ್ಸವಕ್ಕೊಂದು ಅರ್ಥಪೂರ್ಣ ಮಹತ್ವ ಬಂದಂತಾಗುತ್ತದೆ ಎಂದು ಸಭಾಪತಿ ಬಸವರಾಜ ಹೊರಟ್ಟಿಯವರು ಅಭಿಪ್ರಾಯಪಟ್ಟಿದ್ದಾರೆ.

ಈ ತಿಂಗಳಲ್ಲದೇ ವರ್ಷದುದ್ದಕ್ಕೂ ಕನ್ನಡ ಭಾಷೆಯನ್ನು ಗಟ್ಟಿಗೊಳಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರಗಳು, ಸಾಹಿತ್ಯ ಪರಿಷತ್ತು, ಕನ್ನಡ ಪರ ಸಂಘಟನೆಗಳು ಕೆಲಸ ಮಾಡುತ್ತಾ ಬರುತ್ತಿರುವುದನ್ನು ಕಾಣುತ್ತಿದ್ದೇವೆ. ಕರ್ನಾಟಕದಲ್ಲಿ ಕನ್ನಡಿಗನೇ ಸಾರ್ವಭೌಮ, ಕನ್ನಡವೇ ಆಡಳಿತ ಭಾಷೆ ಆಗಬೇಕು. ಆದರೆ ಅನ್ಯ ಭಾಷೆಯ ವ್ಯಾಮೋಹದಿಂದಾಗಿ ಮಾತೃಭಾಷೆಗೆ ಪೆಟ್ಟು ಬೀಳುತ್ತಿದೆ. ದಿನದಿಂದ ದಿನಕ್ಕೆ ಆಂಗ್ಲ ಮಾಧ್ಯಮದ ಶಾಲೆಗಳ ಸಂಖ್ಯೆ ಹೆಚ್ಚುತ್ತಿರುವುದು, ಪಾಲಕರ ಆಂಗ್ಲ ವ್ಯಾಮೋಹದಿಂದ ಸ್ವಾತಂತ್ರ್ಯಪೂರ್ವದ ಕನ್ನಡ ಮಾಧ್ಯಮ ಶಾಲೆಗಳು ಶತಮಾನೋತ್ಸವವನ್ನು ಆಚರಿಸಿಕೊಂಡು ಈಗ ಅಳಿವಿನ ಅಂಚಿನಲ್ಲಿ ಬಂದು ನಿಂತಿರುವುದು ವಿಷಾದದ ಸಂಗತಿ. ಸರ್ಕಾರ ಕನ್ನಡ ಶಾಲೆಗಳ ಅಳಿವು ಉಳಿವಿಗಾಗಿ ಎಷ್ಟೇ ಯೋಜನೆಗಳನ್ನು ತಂದರೂ ಮಾತ್ರ ಭಾಷೆಯ ಶಾಲೆಗಳನ್ನು ಉಳಿಸಿಕೊಳ್ಳಲು ಪರದಾಡಬೇಕಾಗಿದೆ. ಈ ಸಂಗತಿಯತ್ತ ಸರಕಾರ ವಿಶೇಷ ಗಮನಹರಿಸಬೇಕಿದೆ ಎಂದಿದ್ದಾರೆ.



ಈ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ಈ ಬಾರಿಯ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಿದಂತಾಗುತ್ತದೆ ಎಂದು ಸಭಾಪತಿ ಬಸವರಾಜ ಹೊರಟ್ಟಿಯವರು ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ.

ಕನ್ನಡ ಭಾಷೆಯನ್ನು ಸದೃಢಗೊಳಿಸಲು ಹಾಗೂ ನಾಡಿನಾದ್ಯಂತ ಕಟ್ಟಲು ಅಳಿವಿನ ಅಂಚಿನಲ್ಲಿರುವ ಕನ್ನಡ ಶಾಲೆಗಳನ್ನು ಉಳಿಸಿದಾಗ ಮಾತ್ರ ಸಾಧ್ಯ. ಕನ್ನಡ ಮಾಧ್ಯಮದ ಶಾಲೆಗಳು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದರೂ ಕನ್ನಡ ಕಟ್ಟುವ ಕೆಲಸದಲ್ಲಿ ಹಿಂದೆ ಬಿದ್ದಿಲ್ಲ. ಸರಕಾರ ಇವರ ಬೆನ್ನಿಗೆ ಗಟ್ಟಿಯಾಗಿ ನಿಲ್ಲಬೇಕಿದೆ. 1995ರಿಂದ ಆರಂಭವಾದ ಕನ್ನಡ ಮಾಧ್ಯಮ ಶಾಲೆಗಳ ಶಿಕ್ಷಕರು ಕಳೆದ ಎರಡೂವರೆ ದಶಕಗಳಿಂದ ತಮ್ಮ ಬದುಕನ್ನು ಪಣಕ್ಕಿಟ್ಟು ಕನ್ನಡ ಶಾಲೆಯ ಉಳಿವಿಗಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಆ ಶಿಕ್ಷಕರು ಹಲವಾರು ವರ್ಷಗಳಿಂದ ತಮ್ಮ ಜೀವನದ ಭದ್ರತೆಗಾಗಿ ಕನ್ನಡ ಶಾಲೆಗಳಿಗೆ ಅನುದಾನ ನೀಡಿ ಎಂದು ಹಲವಾರು ಬಾರಿ ಬೀದಿಗಿಳಿದು ಹೋರಾಟ ಮಾಡುತ್ತಾ ಬಂದಿದ್ದಾರೆ. ಇಂತಹ ಶಾಲೆಗಳಿಂದಲೇ ಮಾತೃಭಾಷೆ ಇಂದಿಗೂ ಜೀವಂತವಾಗಿದೆ ಎಂದು ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.

## ದೀಪಾವಳಿ ಹಬ್ಬ: ಅಗ್ನಿ ಅನಾಹುತ ತಪ್ಪಿಸಲು ಮುಂಜಾಗ್ರತಾ ಕ್ರಮಕ್ಕೆ ಸೂಚನೆ

■ ವಿಜಯಸಾಕ್ಷಿ ಸುದ್ದಿ, ಗದಗ

ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಅಧಿಕೃತ ಲೈಸನ್ಸ್ ಪಡೆದುಕೊಂಡು ಕ್ರಮಬದ್ಧವಾಗಿ ನವೀಕರಣವಾಗಿರುವ ಪಟಾಕಿ ಅಂಗಡಿಗಳನ್ನು ಅಕ್ಟೋಬರ್ 30 ರಿಂದ ನವೆಂಬರ್ 3 ರವರೆಗೆ ತೆರೆದ ಸ್ಥಳಗಳಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ದಾಸ್ತಾನು ಮಾಡಿ ಮಾರಾಟ ಮಾಡುವ ಷರತ್ತಿಗೊಳಪಟ್ಟು ತಾತ್ಕಾಲಿಕವಾಗಿ ಸ್ಥಳಾಂತರಿಸಲು ಆದೇಶಿಸಲಾಗಿದೆ.

ಬಯಲು ಪ್ರದೇಶಗಳಲ್ಲಿ ತಾತ್ಕಾಲಿಕ ಶೆಡ್ಡುಗಳನ್ನು ಅಗ್ನಿಶಾಮಕ ಇಲಾಖೆ ಕರಾರುಗಳಂತೆ ನಿರ್ಮಿಸಿಕೊಂಡು ಹಾಗೂ ಸುರಕ್ಷತೆಯ ಎಲ್ಲ ವ್ಯವಸ್ಥೆಗಳನ್ನು ಅಳವಡಿಸಿಕೊಂಡು ಹಸಿರು ಪಟಾಕಿಗಳನ್ನಷ್ಟೇ ಮಾರಾಟ ಮಾಡಲು ಆದೇಶ ನೀಡಲಾಗಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ರಾತ್ರಿ 8 ಗಂಟೆಯಿಂದ 10 ಗಂಟೆಯವರೆಗೆ ಮಾತ್ರ ಹಸಿರು ಪಟಾಕಿಗಳನ್ನು ಸಿಡಿಸುವುದು. ರಾತ್ರಿ 10 ಗಂಟೆಯ ನಂತರ ಪಟಾಕಿ ಮಾರಾಟ ಹಾಗೂ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಸ್ಫೋಟಕ ನಿಯಮಗಳ ಅಡಿಯಲ್ಲಿ ಎಲ್ಲ ನಿಬಂಧನೆಗಳನ್ನು ಹಾಗೂ ಪರವಾನಗಿಯ ಷರತ್ತುಗಳನ್ನು ಪಟಾಕಿ ಅಂಗಡಿಗಳ ಮುಖ್ಯಸ್ಥರು ಕಟ್ಟುನಿಟ್ಟಾಗಿ ಅನುಸರಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿಥಿ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ ಮಾದರಿ ಶಾಲೆ, ಮುಂಡರಗಿಯಲ್ಲಿ ಖಾಲಿ ಇರುವ ಆಂಗ್ಲ ಭಾಷೆ ಹಾಗೂ ಉರ್ದು ಭಾಷೆ ವಿಷಯದ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಹ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಹ ಅಭ್ಯರ್ಥಿಗಳು ದಿ. 07.11.2024 ರೊಳಗಾಗಿ ತಮ್ಮ ಶೈಕ್ಷಣಿಕ ದಾಖಲಾತಿಗಳನ್ನು ಮುಖ್ಯೋಪಾಧ್ಯಾಯರು, ಮೌಲಾನಾ ಆಜಾದ ಮಾದರಿ ಶಾಲೆ, ಮುಂಡರಗಿ ಇಲ್ಲಿಗೆ ಖುದ್ದು ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಾಶೀನಾಥ ಕೆ. ಮುಖ್ಯೋಪಾಧ್ಯಾಯರು, ಮೌಲಾನಾ ಆಜಾದ ಮಾದರಿ ಶಾಲೆ, ಮುಂಡರಗಿ ದೂ.ಸಂ:8722390388 ರವರನ್ನು ಶಾಲಾ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

**ಲಿಂ.ಶ್ರೀ ರಾಚೋಟಿ ಶಿವಾಚಾರ್ಯ ಸ್ವಾಮಿಗಳವರ ಪುಣ್ಯ ಸ್ಮರಣೋತ್ಸವದಲ್ಲಿ ರಂಭಾಪುರಿ ಶ್ರೀಗಳು**

# ಭೌತಿಕ ಸಂಪತ್ತು ಜೀವನ ಶಾಶ್ವತವಲ್ಲ


■ **ವಿಜಯಸಾಕ್ಷಿ ಸುದ್ದಿ, ಭದ್ರಾವತಿ**

ಹುಟ್ಟು ಎಷ್ಟು ಸಹಜವೋ ಸಾವು ಕೂಡ ಅಷ್ಟೇ ನಿಶ್ಚಿತ. ಭೌತಿಕ ಸಂಪತ್ತು, ಜೀವನ ಶಾಶ್ವತವಲ್ಲ. ಆದರೆ ಸತ್ಯ ಧರ್ಮ ಒಂದೇ ಸ್ಥಿರವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಬಿಳಕಿ ಹಿರೇಮಠದಲ್ಲಿ ಜರುಗಿದ ಲಿಂ.ಶ್ರೀ ರಾಚೋಟಿ ಶಿವಾಚಾರ್ಯ ಸ್ವಾಮಿಗಳವರ 57ನೇ ವರ್ಷದ ಪುಣ್ಯ ಸ್ಮರಣೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಅರಳಿದ ಪುಷ್ಪಗಳು ಬೀರುವ ಸುಗಂಧ ಗಾಳಿಯಲ್ಲಿ ಹರಡುವಂತೆ ಸತ್ಕಾರ್ಯಗಳಿಂದ ಮನುಷ್ಯನ ಕೀರ್ತಿ ಎಲ್ಲೆಡೆ ಹರಡುತ್ತದೆ. ಮನುಷ್ಯ ಆಶೆ ಕಳೆದುಕೊಂಡು ಬದುಕಬಹುದು. ಆದರೆ ಆಸಕ್ತಿ ಕಳೆದುಕೊಂಡು ಬಾಳಲಾಗದು. ಧರ್ಮ, ಸತ್ಯದ ದಾರಿಯಲ್ಲಿ ನಡೆಯುವವನಿಗೆ ನೂರೆಂಟು ಕಷ್ಟಗಳು ಬಂದರೂ ಕೊನೆಗೆ ಸತ್ಯ ಧರ್ಮಗಳ ಪರಿಪಾಲನೆ ನಮ್ಮನ್ನು ಕಾಪಾಡುತ್ತದೆ. ದೇವರ ಹೆಸರಿನಲ್ಲಿ ಉಪವಾಸ ಮಾಡುವುದು ದೊಡ್ಡ ಸಾಧನೆಯಲ್ಲ. ಜನ್ಮ ಕೊಟ್ಟ ತಂದೆ-ತಾಯಿ, ಮಾರ್ಗದರ್ಶನ ನೀಡುವ ಗುರುವಿನಲ್ಲಿ ಶ್ರದ್ಧೆಯಿಟ್ಟು ಕಾಪಾಡುವುದೇ ದೊಡ್ಡ ಸಾಧನೆ ಎಂಬುದನ್ನು ಮರೆಯಬಾರದು ಎಂದರು.

ಸಮಾರಂಭ ಉದ್ಘಾಟಿಸಿದ ಶಿವಮೊಗ್ಗ ಕ್ಷೇತ್ರದ ಲೋಕಸಭಾ ಸದಸ್ಯರಾದ ಬಿ.ವೈ. ರಾಘವೇಂದ್ರ ಮಾತನಾಡಿ, ಮನಸೊಂದಿದ್ದರೆ ಮಾರ್ಗವಿದೆ. ನಂಬಿಕೆಯೊಂದಿದ್ದರೆ ಜೀವನವಿದೆ. ನಿಷ್ಕಲ್ಮಶವಾದ ಭಕ್ತಿಯೊಂದಿದ್ದರೆ ಪರಮಾತ್ಮನ ಅನುಗ್ರಹ ಆಗುವುದರಲ್ಲಿ ಯಾವುದೇ ಸಂದೇಹವಿಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವ ಚಿಂತನಗಳನ್ನು ರಾಚೋಟಿ ಶ್ರೀಗಳು ಪರಿಪಾಲಿಸಿ ಭಕ್ತರಿಗೆ ಬೋಧಿಸಿದ ಶಕ್ತಿಯನ್ನು ಮರೆಯಲಾಗದು.



ಅವರ ಜೀವನದ ಸಿದ್ಧಿ ಸಾಧನೆಗಳು ನಮ್ಮೆಲ್ಲರಿಗೂ ದಾರಿ ದೀಪವಾಗಲೆಂದರು.

ನೇತೃತ್ವ ವಹಿಸಿದ ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು, ಅಧ್ಯಕ್ಷತೆ ವಹಿಸಿದ ಭದ್ರಾವತಿ ಬಿ.ಕೆ. ಮೋಹನ, ಸಮ್ಮುಖ ವಹಿಸಿದ ಎಡೆಯೂರು ಬಾಳೆಹೊನ್ನೂರು ಖಾಸಾ ಶಾಖಾ ಮಠದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು.

ಸಮಾರಂಭದಲ್ಲಿ ರಟ್ಟೀಹಳ್ಳಿ, ಕೆ.ಬಿದರೆ, ಮಳಲಿಮಠ, ತಾವರೆಕೆರೆ, ಹುಣಸಘಟ್ಟ, ಹಾರನಹಳ್ಳಿ, ಹಣ್ಣೆಮಠ. ನಂದಿಪುರ, ಮಾದಿಹಳ್ಳಿ, ಬೀರೂರು, ಮೆಟಕುರ್ಕೆಮಠ, ಕುರವತ್ತಿ, ನಂದಿಪುರ ಶ್ರೀಗಳವರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಟಿ.ವಿ. ಈಶ್ವರಯ್ಯ, ಬಿ.ಕೆ. ಜಗನ್ನಾಥ, ಎಸ್.ಎನ್. ಮಹಾಲಿಂಗಶಾಸ್ತ್ರಿ, ಎಸ್.ಎಸ್. ಜ್ಯೋತಿಪ್ರಕಾಶ್, ಎ.ಎಂ. ಚಂದ್ರಯ್ಯ, ಹೆಚ್.ಮಲ್ಲಿಕಾರ್ಜುನಸ್ವಾಮಿ, ಡಾ.ರೇಣುಕಾರಾಧ್ಯ ಶಾಸ್ತ್ರಿಗಳು, ಸಿದ್ಧಲಿಂಗಯ್ಯ, ಉಮೇಶ ಹಿರೇಮಠ ಮುಂತಾದವರು ಶ್ರೀ ರಂಭಾಪುರಿ ಜಗದ್ಗುರುಗಳವರಿಂದ ಆಶೀರ್ವಾದ ಗುರುರಕ್ಷೆ ಸ್ವೀಕರಿಸಿದರು.

ಇದೇ ಸಂದರ್ಭದಲ್ಲಿ ಕೋಟೆಮಲ್ಲೂರಿನ ಶತಾಯುಷಿ ವೇ.ಶಿವಲಿಂಗಾರಾಧ್ಯ ಶಾಸ್ತ್ರಿಗಳವರಿಗೆ 'ಸೌಜನ್ಯ ಸುಧಾಕರ ರತ್ನ' ಎಂಬ ಪ್ರಶಸ್ತಿಯಿತ್ತು ಜಗದ್ಗುರುಗಳು ಶುಭ ಹಾರೈಸಿದರು. ಗುರುಪ್ರಸಾದ ದೇವರು ಸ್ವಾಗತಿಸಿದರು. ಶಾಂತಾ ಆನಂದ ನಿರೂಪಿಸಿದರು. ಗಂಜಿಗಟ್ಟಿ ಕೃಷ್ಣಮೂರ್ತಿ ಜಾನಪದ ಗೀತೆಗಳನ್ನು ಹಾಡಿದರು. ಅನ್ನ ದಾಸೋಹವನ್ನು ಶಾಸಕ ಬಿ.ಕೆ. ಸಂಗಮೇಶ ಸಹೋದರರು ನೆರವೇರಿಸಿದರು.

### ತಪ್ಪು ನಿರ್ಣಯ ಕೈಕೊಳ್ಳಬೇಡಿ

ಇತ್ತೀಚೆಗೆ ಜಾತಿ ಜನಗಣತಿ ಹಿನ್ನೆಲೆಯಲ್ಲಿ ಸೇರಿದ ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭೆಯ ಅಧ್ಯಕ್ಷರು ಮೊದಲ್ಗೊಂಡು ಹಲವಾರು ಗಣ್ಯರು ಪಾಲ್ಗೊಂಡಿದ್ದು ಸಂತೋಷದ ಸಂಗತಿ. ಮೊದಲನೆಯ ಠರಾವಿನಲ್ಲಿ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರ ತತ್ವ ಸಿದ್ಧಾಂತ ಮತ್ತು ಶ್ರೀ ಬಸವಾದಿ ಶಿವಶರಣರ ವಿಚಾರ ಧಾರೆಯಂತೆ ಮಹಾಸಭಾ ಕಾರ್ಯ ನಿರ್ವಹಿಸುತ್ತದೆ ಎಂದಾಗಬೇಕಿತ್ತು. ಆದರೆ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರ ಹೆಸರು ಕೈ ಬಿಟ್ಟಿರುವುದು ಒಳ್ಳೆಯದಲ್ಲ. ಈ ವಿಚಾರವನ್ನು ಮಹಾಸಭಾ ಗಂಭೀರವಾಗಿ ಅವಲೋಕನ ಮಾಡಿ ಸರಿಪಡಿಸುವತ್ತ ಗಮನ ಕೊಡಬೇಕಾದ ಅಗತ್ಯವಿದೆ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ಎಚ್ಚರಿಸಿದರು.

# ಜೂಜಾಟ ನಿಷೇಧಕ್ಕೆ ಮನವಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಾದ್ಯಂತ ದೀಪಾವಳಿಯ ಹಬ್ಬದ ನೆಪದಲ್ಲಿ ಎಲ್ಲ ಅಂಗಡಿ, ಮನೆ ಹಾಗೂ ಪುಟ್‌ಪಾತ್‌ನಲ್ಲಿ ಪೆಂಡಾಲ್ ಹಾಕಿ, ಸುತ್ತಲೂ ಪರದೆ ಕಟ್ಟಿ ರಾಜಾರೋಷವಾಗಿ ಇಸ್ಪೇಟ್ ಮತ್ತು ಜೂಜಾಟ ನಡೆಯುತ್ತದೆ. ಬರಗಾಲದ ಪರಿಸ್ಥಿತಿಯಿಂದ ಸಾವಿರಾರು ಕುಟುಂಬಗಳು ಸಂಕಷ್ಟದಲ್ಲಿರುವಾಗ ಈ ಜೂಜಾಟದಿಂದ ಬಹಳಷ್ಟು ಕುಟುಂಬಗಳು ಹಣ ಕಳೆದುಕೊಳ್ಳುವುದರೊಂದಿಗೆ ಸಮಸ್ಯೆಗಳ ಸುಳಿಗೆ ಸಿಲುಕುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕೆಂದು ರಾಜ್ಯ ಮಾಹಿತಿ ಹಕ್ಕು & ಸಾಮಾಜಿಕ ಕಾರ್ಯಕರ್ತರ ವೇದಿಕೆಯ ಗದಗ ಜಿಲ್ಲಾ ಘಟಕದ ಜಿಲಾಧ್ಯಕ್ಷ ಮಂಜುನಾಥ ದು.ಹದ್ದಣ್ಣವರ ಪೋಲೀಸ್ ಇಲಾಖೆಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ಶೇಖಸಾಬ ಕಾತರಕಿ, ಪ್ರಧಾನ ಕಾರ್ಯದರ್ಶಿ ಯಾಸೀನಸಾಬ್ ಬೊದ್ಲೇಖಾನ, ಖಜಾಂಚಿಗಳಾದ ಡಾ. ಸಿ.ಎಸ್. ಹನಮಂತಗೌಡರ, ಸಂಘಟನಾ ಕಾರ್ಯದರ್ಶಿ ಮೌಲಾಸಾಬ ಗಚ್ಚಿ, ಸಾಮಾಜಿಕ ಕಾರ್ಯಕರ್ತರಾದ ರಾಜೇಸಾಬ ಬೊದ್ಲೇಖಾನ, ಇಸ್ಮಾಯಿಲ ಬದಾಮಿ ಇದ್ದರು.

**ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ರಾಷ್ಟ್ರೀಯ ಏಕತಾ ದಿನ ಆಚರಣೆ**

# ಸರ್ದಾರ್ ಪಟೇಲರ ಕೊಡುಗೆ ಸ್ಮರಣೀಯ

■ **ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳು ಬುಧವಾರ ಭಾರತದ ಏಕತೆಯ ಪ್ರತಿಕ ಎಂದೇ ಗುರುತಿಸಲಾದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಏಕತಾ ದಿನವನ್ನು ಆಚರಿಸಿದರು.




ಕಾರ್ಯಕ್ರಮ ಉದ್ಘಾಟಿಸಿದ ಪ್ರಾಂಶುಪಾಲ ಡಾ. ಎಮ್.ಎಮ್. ಅವಟಿ ಮಾತನಾಡಿ, ಸರ್ದಾರ್ ಪಟೇಲ್ ಅವರ ಆದರ್ಶಗಳು ಹಾಗೂ ದೇಶದ ಏಕತೆಗಾಗಿ ಅವರು ಸಲ್ಲಿಸಿದ ಕೊಡುಗೆಗಳು ಪ್ರತಿ ಭಾರತೀಯನಿಗೂ ಪ್ರೇರಣೆಯಾಗಿದೆ ಎಂದರು.

ಎಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥರಾದ ಡಾ. ಈರಣ್ಣ ಕೋರಚಗಾಂವ ಮಾತನಾಡಿ, ಭಿನ್ನ ಭಾಷೆ, ಸಂಸ್ಕೃತಿ ಮತ್ತು ಸಾಂಸ್ಕೃತಿಕ ವೈವಿಧ್ಯತೆಯ ನಡುವೆಯೂ ನಾವು ಒಟ್ಟಾಗಿರುವುದು ನಮ್ಮ ದೇಶದ ಸೌಂದರ್ಯ ಎಂದರು.

ಪ್ರೊ. ಮಲ್ಲಿಕಾರ್ಜುನ ಜಿ.ಡಿ. ಮತ್ತು ಪ್ರೊ. ತೆಹಸಿನ್ ಶಿಗ್ಲಿ ಅವರು ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಪಟೇಲ್ ಅವರ ಜೀವನದ ಬಗ್ಗೆ ವಿಚಾರ, ಮತ್ತು ರಾಷ್ಟ್ರಭಕ್ತಿಯ ಹಾಡುಗಳೊಂದಿಗೆ ದೇಶದ ಏಕತೆ ಮತ್ತು ಸಾಮರಸ್ಯದ ಮಹತ್ವವನ್ನು ಪ್ರಸ್ತುತಪಡಿಸಿದರು.

ಪ್ರೊ. ಜಗದೀಶ ಶಿವನಗುತ್ತಿ ಮತ್ತು ಪ್ರೊ. ಸಂತೋಷಕುಮಾರ್ ಜಿ.ಎಂ. ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಮತ್ತು ಶಿಕ್ಷಕರು 'ಏಕತಾ ನಡೆ'ಯಲ್ಲಿ ಪಾಲ್ಗೊಂಡರು. ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಈ ಓಟದಲ್ಲಿ ಭಾಗವಹಿಸಿ, 'ಏಕತೆಯಲ್ಲಿ ಬಲವಿದೆ' ಎಂಬ ಸಂದೇಶವನ್ನು ಸಾರಿದರು.

ಕಾರ್ಯಕ್ರಮದಲ್ಲಿ ಪ್ರೊ. ಗೌತಮ ರೇವಣಕರ, ಪ್ರೊ. ದಯಾನಂದ ಗೌಡರ, ಪ್ರೊ. ಲೋಕೇಶ, ಪ್ರೊ. ರಮೇಶ ಬಡಿಗೇರ, ಪ್ರೊ. ಆರ್.ವಿ. ಕಡಿ, ಪ್ರೊ. ಐ.ಎಸ್. ಪಾಟೀಲ, ಪ್ರೊ. ಅಶ್ವಿನಿ ಅರಳಿ, ಪ್ರೊ. ಮಧುಸೂಧನ ಕುಲಕರ್ಣಿ, ಪ್ರೊ. ಶೈಲಜಾ ಮುದೇನಗುಡಿ, ಪ್ರೊ. ಲೋಹಿತ್, ಪ್ರೊ. ಪ್ರಸನ್ನ ನಾಡಗೌಡ, ಪ್ರೊ. ಸುನಿಲ ಪಾಟೀಲ, ಪ್ರೊ. ವೀರೇಶ ಮಾಗಳದ, ಪ್ರೊ. ವಿಜಯಕುಮಾರ ಮಾಲಗಿತ್ತಿ, ಪ್ರೊ. ಮಹಾಂತ ಕಟ್ಟಿಮನಿ, ಪ್ರೊ. ಬಸವರಾಜ ಪಾಟೀಲ ಸೇರಿದಂತೆ ಶಿಕ್ಷಕರು ಮತ್ತು ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ತಹಸೀಲ್ದಾರರಿಂದ ಬೆಳೆ ಹಾನಿ ಪರಿಶೀಲನೆ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕಳೆದ ವಾರ ಸುರಿದ ಮಳೆ ನರೇಗಲ್ಲ ಹೋಬಳಿ ವ್ಯಾಪ್ತಿಯಲ್ಲಿ ಸಾಕಷ್ಟು ಹಾನಿಯನ್ನುಂಟು ಮಾಡಿದೆ. ರೈತರು ಬೆಳೆದ ಉಳ್ಳಾಗಡ್ಡಿ, ಮೆಣಸಿನಕಾಯಿ ಸೇರಿದಂತೆ ಇತರೆ ಬೆಳೆಗಳ ಹಾನಿಯನ್ನು ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರವೀಂದ್ರಗೌಡ ಪಾಟೀಲ, ತೋಟಗಾರಿಕೆ ಇಲಾಖೆ ಎಎಚ್‌ಒ ಚಿದಾನಂದ ಕಳಕಾಪೂರ, ನರೇಗಲ್ಲ ರೈತ ಸಂಪರ್ಕ ಕೇಂದ್ರದ ಚಿದಾನಂದ ಕಮ್ಮಾರ, ಗ್ರಾಮ ಲೆಕ್ಕಾಧಿಕಾರಿ ದಾವಲ ಇಟಗಿ ಬುಧವಾರ ವಿವಿಧ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ರೈತರಾದ ಕುಮಾರ ಮಲ್ಲನಗೌಡ್ರ ಮಾತನಾಡಿ, ಈ ಭಾಗದ ಪ್ರಮುಖ ತೋಟಗಾರಿಕೆ ಬೆಳೆಯಾದ ಉಳ್ಳಾಗಡ್ಡಿ ಮತ್ತು ಮೆಣಸಿನಕಾಯಿ ಬೆಳೆಗಳು ಸತತ



ಮಳೆಯಿಂದಾಗಿ ಕೊಳೆತು ಹೋಗಿವೆ. ಇನ್ನೇನು ಉಳ್ಳಾಗಡ್ಡಿ ಕಟಾವು ಮಾಡಿ ಮಾರಾಟ ಮಾಡಬೇಕು ಎನ್ನುವಷ್ಟರಲ್ಲಿ ಮಳೆಯಾಗಿ ಸಾಕಷ್ಟು ಹಾನಿಯಾಗಿದೆ. ಹಿಂಗಾರಿನ ಪ್ರಮುಖ ವಾಣಿಜ್ಯ ಬೆಳೆಯಾದ ಕಡಲೆ ಬಿತ್ತನೆ ಮಾಡಿದ ಬೀಜ ಭೂಮಿಯಲ್ಲಿ ಮೊಳಕೆ ಒಡೆದು ಅಲ್ಲೇ ಕಮರಿ ಹೋಗಿದೆ. ಇದರಿಂದ ನಷ್ಟ ಅನುಭವಿಸುವಂತಾಗಿದೆ. ರೈತರಿಗೆ ಪರಿಹಾರ ಮತ್ತು ಬೆಳೆ ವಿಮೆ ನೀಡಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಬೆಳೆ ಪರಿಹಾರ ನೀಡುವಲ್ಲಿ ಯಾವುದೇ ತಾರತಮ್ಯ ಮಾಡದೆ ಅದಷ್ಟು ಬೇಗ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು.

ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಮಾತನಾಡಿ, ಕಂದಾಯ, ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳು ಜಂಟಿಯಾಗಿ ಬೆಳೆ ಹಾನಿ ಪರಿಶೀಲನೆ ಕೈಗೊಳ್ಳುತ್ತಿದ್ದು, ಬೆಳೆ ಹಾನಿಯ ಬಗ್ಗೆ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಮಂಜುನಾಥ ಮುಗಳಿ, ನರೇಶ ಜೋಳದ, ಹನಮಂತ ತಳವಾರ ಸೇರಿದಂತೆ ಇತರರಿದ್ದರು.

# ಜ್ಯೋತಿಶ್ರೀಗೆ 'ಸ್ಟಾರ್ ವುಮನ್' ಅವಾರ್ಡ್

■ **ವಿಜಯಸಾಕ್ಷಿ ಸುದ್ದಿ, ಗದಗ**



ಸ್ಥಳೀಯ ನಿಮಿಷಾಂಬಾ ಅಕಾಡೆಮಿಯ ಸಂಸ್ಥಾಪಕಿ, ವಿದುಷಿ ಜ್ಯೋತಿಶ್ರೀ ಎಂ.ಎಲ್. ಅವರಿಗೆ ಭರತನಾಟ್ಯ ಮತ್ತು ಶಾಸ್ತ್ರೀಯ ಸಂಗೀತ ಕ್ಷೇತ್ರದಲ್ಲಿ ಮಾಡಿದ ಸಾಧನೆಗಾಗಿ ಹೈಬ್ರೀಡ್ ನ್ಯೂಸ್ ಕನ್ನಡ ಸುದ್ದಿ ವಾಹಿನಿ ವತಿಯಿಂದ ಕೊಡಮಾಡುವ ಕರುನಾಡು ಸಾಧಕರು 'ಸ್ಟಾರ್ ವುಮನ್' ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಇದೇ ನ. 11ರಂದು ಬೆಂಗಳೂರಿನಲ್ಲಿ ನಡೆಯುವ ಕರುನಾಡು ಸಾಧಕರು ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.



ಗದಗ ನಗರದ ಎಸ್.ಎಮ್. ಕೃಷ್ಣಾ ನಗರದ ವಾರ್ಡ್ ನಂ.1ರ ನಿವಾಸಿ ಮೆಹಬೂಬ್ ರಾಟಿ ಅವರ ಪುತ್ರಿಗೆ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಸ್ಪತ್ರೆಯಲ್ಲಿ ಶಸ್ತ್ರ ಚಿಕಿತ್ಸೆ ಮಾಡಿಸಿದ್ದು, ಸಚಿವ ಹೆಚ್.ಕೆ. ಪಾಟೀಲರ ಆದೇಶದ ಮೇರೆಗೆ ಕಟ್ಟಡ ಕಾರ್ಮಿಕರ ನಿಧಿಯಲ್ಲಿ 91540 ರೂಪಾಯಿಗಳ ಅನುದಾನದ ಆದೇಶ ಪತ್ರವನ್ನು ವಿತರಿಸಿದರು. ಸಹಕಾರ ನಿಡಿದ ಕೃಷ್ಣಗೌಡ ಹೆಚ್ ಪಾಟೀಲ್ , ವೈದ್ಯಾಧಿಕಾರಿ ಶ್ರೀನಿವಾಸ ಆರೇರ, ಬಸವರಾಜ ಕಡೇಮನಿ, ಅನಿಲಕುಮಾರ ಸಿದ್ಧಮನ್ಮಹಳ್ಳಿ, ಅಶೊಕ ಮಂದಾಲಿ, ಉಮರಫಾರೂಕ ಬಾರಿಗಿಡದ ಅವರಿಗೆ ಫಲಾನುಭವಿಗಳು ಕೃತಜ್ಞತೆ ಅರ್ಪಿಸಿದರು.


**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ,**

ಗದಗ ಜಿಲ್ಲಾ : ಗದಗ ಪಿನ್‌ಕೋಡ್-582101 ರಾಜ್ಯ : ಕರ್ನಾಟಕ

ಇ-ಮೇಲ್ : apmcgadag4@gmail.com (08372) ದೂ : 238354, ಫ್ಯಾಕ್ಸ : 237897

ಸಂ: ಕೃಉಮಾಸ:ಗ: 486 2024-2025 ದಿನಾಂಕ : 30-10-2024

**ಪ್ರಕಟಣೆ**

ಈ ಮೂಲಕ ಯಾವತ್ತೂ ರೈತಬಾಂಧವರಿಗೆ, ಮತ್ತು ಪೇಟೆ ಕಾರ್ಯಕರ್ತರಿಗೆ ತಿಳಿಯಪಡಿಸುವದೇನೆಂದರೆ, ಮೆ: ಅರಿಹಂತ ಟ್ರೇಡಿಂಗ್ ಕಂಪನಿ ಸಾ: ಗದಗ ಇವರು ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಹೊಂದಿರುವ ತಮ್ಮ ನಿವೇಶನ ಸಂಖ್ಯೆ: 184/ಬಿ ಹಾಗೂ ಅದರಲ್ಲಿರುವ ಕಟ್ಟಡವನ್ನು ಮೆ॥ ರೋನಿಚಾ ಟ್ರೇಡಿಂಗ್ ಕಂಪನಿ ಖರೀದಿದಾರರು ಸಾ: ಗದಗ ಇವರಿಗೆ ವರ್ಗಾವಣೆ/ಮಾರಾಟ ಮಾಡಲು ಸಮಿತಿಯ ಅನುಮತಿ ಕೋರಿರುತ್ತಾರೆ. ಕಾರಣ ಈ ಕುರಿತು ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಪ್ರಕಟಣೆ ದಿನಾಂಕದಿಂದ 15 ದಿನಗಳ ಒಳಗಾಗಿ ಸಮಿತಿಯ ಕಾರ್ಯದರ್ಶಿಯವರಿಗೆ ಲಿಖಿತ ಮೂಲಕ ಸಲ್ಲಿಸಲು ತಿಳಿಸಲಾಗಿದೆ. ನಿಗದಿತ ಅವಧಿಯ ನಂತರ ಬಂದ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/- **ಕಾರ್ಯದರ್ಶಿ** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ

ಸಹಿ/- **ಆಡಳಿತಾಧಿಕಾರಿಗಳು** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ



ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಶಿಗ್ಲಿ ತಾಲೂಕ ॥ ಲಕ್ಷ್ಮೇಶ್ವರ, ಜಿಲ್ಲಾ ॥ ಗದಗ**

ಸಂ: ಗ್ರಾ.ಪಂ.ಶಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ : 28/10/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಶಿಗ್ಲಿ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ. ಗಳಲ್ಲಿ) | ಷರಾ |
|---|---|---|---|---|
| 01 | ಶಿಗ್ಲಿ ಗ್ರಾಮದ ವಾರ್ಡ ನಂ- 1 ರಲ್ಲಿ ಗುರುಬಸಪ್ಪಜ್ಜನ ಮಠದ ಹತ್ತಿರ ಸಿ.ಸಿ ರಸ್ತೆ ನಿರ್ಮಾಣ | 154768.03 | 500.00 | ಖಾಲಿ ಟೆಂಡರ್ ಫಾರ್ಮ ಗ್ರಾಮ ಪಂಚಾಯತಿ-ಯಲ್ಲಿ ಪಡೆದು ಸಲ್ಲಿಸುವುದು |
| 02 | ಶಿಗ್ಲಿ ಗ್ರಾಮದ ವಾರ್ಡ ನಂ- 5 ರಲ್ಲಿ ನಾಗರಾಜ ತವರಿ ಮನೆಯಿಂದ ಸಿ.ಡಿ ವರೆಗೆ ಸಿ.ಸಿ ರಸ್ತೆ ನಿರ್ಮಾಣ | 167591.79 | 500.00 | |
| 03 | ಶಿಗ್ಲಿ ಗ್ರಾಮದ ವಾರ್ಡ ನಂ- 8 ರಲ್ಲಿ ಜಿ.ಬಿ.ಎಸ್.ಎಸ್. ಶಾಲೆಯ ಹಿಂದಿನಿಂದ ಸಿಡಿವರೆಗೆ ಸಿ.ಸಿ ರಸ್ತೆ ನಿರ್ಮಾಣ | 170677.63 | 500.00 | |
| 04 | ಶಿಗ್ಲಿ ಗ್ರಾಮದ ವಾರ್ಡ ನಂ- 1 ರಲ್ಲಿ ಶಂಕ್ರಣ್ಣ ದೇಸಾಯಿ ಮನೆಯಿಂದ ಹನಮಂತಪ್ಪ ಗುಲಗಂಜಿ ಮನೆವರೆಗೆ ಸಿ.ಸಿ ಗಟಾರ ನಿರ್ಮಾಣ | 141657.67 | 500.00 | |
| 05 | ಶಿಗ್ಲಿ ಗ್ರಾಮದ ವಾರ್ಡ ನಂ- 3 ರಲ್ಲಿ ನೀಲಪ್ಪ ರಜಪೂತ ಮನೆಯಿಂದ ಮರಾತೆ, ಮನೆವರೆಗೆ ಸಿ.ಸಿ ಗಟಾರ ನಿರ್ಮಾಣ | 150392.63 | 500.00 | |
| 06 | ಶಿಗ್ಲಿ ಗ್ರಾಮದ ವಾರ್ಡ ನಂ-8 ರಲ್ಲಿ ಜಿ.ಬಿ.ಎಸ್.ಎಸ್. ಶಾಲೆಯ ಹಿಂದಿನಿಂದ ಮಲ್ಲೇಶಪ್ಪ ಬಮ್ಮನಕಟ್ಟಿ ಮನೆವರೆಗೆ ಎರಡು ಬಾಜು ಸಿ.ಸಿ ಗಟಾರ ನಿರ್ಮಾಣ | 129571.55 | 500.00 | |
| 07 | ಶಿಗ್ಲಿ ಗ್ರಾಮದ ಸರಕಾರಿ ಫಕ್ಕೀರಮ್ಮ ಅಣ್ಣಿಗೇರಿ ಶಾಲಾ ಆವರಣದಲ್ಲಿ ಬಾಸ್ಕೆಟ್ ಬಾಲ್ ಕೋಟ್ ನಿರ್ಮಾಣ | 399393.6 | 500.00 | |
| 08 | ಶಿಗ್ಲಿ ಗ್ರಾಮದ ಪಿ.ಎಮ್.ಬಳಿಗಾರ ಸರಕಾರಿ ಪದವಿ ಪೂರ್ವ ಕಾಲೇಜ ಆವರಣದಲ್ಲಿ ಬಾಸ್ಕೆಟ್ ಬಾಲ್ ಕೋಟ್ ನಿರ್ಮಾಣ | 395658.29 | 500.00 | |
| 09 | ಶಿಗ್ಲಿ ಗ್ರಾಮದ ಸರಕಾರಿ ಕನ್ನಡ ಗಂಡು ಮಕ್ಕಳ ಶಾಲಾ ಆವರಣದಲ್ಲಿ ಬಾಸ್ಕೆಟ್ ಬಾಲ್ ಕೋಟ್ ನಿರ್ಮಾಣ. | 397373.36 | 500.00 | |
| 10 | ಶಿಗ್ಲಿ ಗ್ರಾಮದ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ , ವಿದ್ಯಾನಗರ ಶಿಗ್ಲಿ ಶಾಲಾ ಶೌಚಾಲಯ ನಿರ್ಮಾಣ | 158553.52 | 500.00 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : **04/11/2024** ರಿಂದ **11/11/2024** ರವರೆಗೆ, ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ : **11/11/2024**, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : **11/11/2024** ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ, ತೆರೆಯುವ ದಿನಾಂಕ ಹಾಗೂ ಸಮಯ : **11/11/2024** ರ ಮಧ್ಯಾಹ್ನ 3.00 ಗಂಟೆ

**ನಿಬಂಧನೆಗಳು** : (1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಶಿಗ್ಲಿಯಿಂದ ಮಾಹಿತಿ ಪಡೆಯಬಹುದಾಗಿದೆ. (2) ದರಪಟ್ಟಿಗಳನ್ನು ಅನುಮೋದಿಸುವ ಹಾಗೂ ತಿರಸ್ಕರಿಸುವ ಅಂತಿಮ ಅಧಿಕಾರ ಗ್ರಾಮ ಪಂಚಾಯತ ಹೊಂದಿರುತ್ತದೆ.

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಶಿಗ್ಲಿ** ವಾಸಾಸಂಇ/ಗದಗ/ಕೆಎಸ್‌ಎಂಸಿಎ/341/2024-25 **ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತ ಶಿಗ್ಲಿ**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka